ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 88 Thursday **24-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 88 ಗುರುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಬರದ ನಡುವೆ ಹೂವಿನ ಹೋರಾಟ!

ಕೊಳವೆಬಾವಿಯ ನೀರು, ಸಾಲದ ಬಂಡವಾಳ... ಸೇವಂತಿಗೆಯಲ್ಲಿ ಬದುಕಿನ ಭರವಸೆ ಹುಡುಕುತ್ತಿರುವ ಜಗಳೂರು ರೈತರು

“ಮುಂಜಾನೆಯ ಮೆರಗು”

ಜಗಳೂರು, ಸೆ.23– ಒಂದೆಡೆ ಮಳೆ ಕೊರತೆ... ಮತ್ತೊಂದೆಡೆ ಬರದ ಬಿಸಿಲು... ಕೃಷಿ ಬದುಕನ್ನೇ ಕಂಗೆಡಿಸಿರುವ ಪರಿಸ್ಥಿತಿಯ ನಡುವೆಯೂ ಜಗಳೂರು ತಾಲೂಕಿನ ಕೆಲ ರೈತರು ಕೊಳವೆಬಾವಿಯ ನೀರನ್ನು ನಂಬಿ ಹೂವಿನ ಕೃಷಿಯತ್ತ ಮುಖ ಮಾಡಿದ್ದಾರೆ. ಅದರಲ್ಲೂ ಸೇವಂತಿಗೆ ಹೂವಿನ ಬೆಳೆ ರೈತರ ಪಾಲಿಗೆ ಬದುಕಿನ ಭರವಸೆಯ ಜೊತೆಗೆ ದರದ ಏರಿಳಿತದ ಸಿಹಿ–ಕಹಿಯನ್ನೂ ನೀಡುತ್ತಿದೆ.

ಜಗಳೂರು ತಾಲೂಕು ಬರಪೀಡಿತ ಪ್ರದೇಶವಾಗಿದ್ದರೂ, ಲಭ್ಯವಿರುವ ಅಲ್ಪ ನೀರಿನ ಸಂಪನ್ಮೂಲವನ್ನು ಬಳಸಿಕೊಂಡು ರೈತರು ತೋಟಗಾರಿಕೆ ಬೆಳೆಗಳತ್ತ ಆಸಕ್ತಿ ತೋರುತ್ತಿದ್ದಾರೆ. ಸಾಂಪ್ರದಾಯಿಕ ಬೆಳೆಗಳೊಂದಿಗೆ ಹೂವಿನ ಕೃಷಿಯನ್ನು ಕೈಗೆತ್ತಿಕೊಂಡಿರುವ ರೈತರು, ನೀರಿನ ಸಮಸ್ಯೆಯ ನಡುವೆಯೂ ಉತ್ತಮ ಆದಾಯದ ನಿರೀಕ್ಷೆಯಲ್ಲಿದ್ದಾರೆ.

ಹೂವಿನ ಕೃಷಿಗೆ ಕಸಬಾ–ಸೊಕ್ಕೆ ಭಾಗದಲ್ಲಿ ಒತ್ತು

ತಾಲೂಕಿನ ಕಸಬಾ ಹಾಗೂ ಸೊಕ್ಕೆ ಹೋಬಳಿ ವ್ಯಾಪ್ತಿಯಲ್ಲಿ ಹೂವಿನ ಬೆಳೆ ಬೆಳೆಯುವ ರೈತರ ಸಂಖ್ಯೆ ಹೆಚ್ಚಾಗಿದೆ. ರಾಷ್ಟ್ರೀಯ ಹೆದ್ದಾರಿ ಪಕ್ಕದ ದೊಣ್ಣೇಹಳ್ಳಿ, ಕಲ್ಲೇದೇವಪುರ, ಗೌರಮ್ಮನಹಳ್ಳಿ, ಕಾನನಕಟ್ಟೆ, ಸೊಕ್ಕೆ ಸೇರಿದಂತೆ ಹಲವು ಗ್ರಾಮಗಳ ರೈತರು ತಮ್ಮ ಜಮೀನುಗಳಲ್ಲಿ ವಿವಿಧ ಹೂವಿನ ಬೆಳೆಗಳನ್ನು ಬೆಳೆಯುತ್ತಿದ್ದಾರೆ.

ಮಾರುಕಟ್ಟೆಯಲ್ಲಿ ಪ್ರತಿದಿನವೂ ಬೇಡಿಕೆ ಇರುವ ಸೇವಂತಿಗೆ ಹೂವು ರೈತರ ಗಮನ ಸೆಳೆದಿದೆ. ಹಬ್ಬ, ಜಾತ್ರೆ, ಶುಭ ಸಮಾರಂಭ ಸೇರಿದಂತೆ ಹಲವು ಸಂದರ್ಭಗಳಲ್ಲಿ ಸೇವಂತಿಗೆ ಹೂವಿಗೆ ಬೇಡಿಕೆ ಇರುವುದರಿಂದ, ಉತ್ತಮ ದರ ಸಿಕ್ಕರೆ ಈ ಬೆಳೆ ರೈತರ ಆದಾಯಕ್ಕೆ ನೆರವಾಗುತ್ತದೆ.



ಕೊಳವೆಬಾವಿಯೇ ಜೀವನಾಡಿ

ಮಳೆ ಕೈಕೊಟ್ಟಿರುವ ಸಂದರ್ಭದಲ್ಲಿ ಹೂವಿನ ಗಿಡಗಳನ್ನು ಉಳಿಸಿಕೊಳ್ಳಲು ರೈತರು ಕೊಳವೆಬಾವಿಯ ನೀರನ್ನೇ ಅವಲಂಬಿಸಿದ್ದಾರೆ. ಮಳೆಯನ್ನೇ ನಂಬಿ ಕೃಷಿ ಮಾಡುವುದು ಕಷ್ಟವಾಗಿರುವುದರಿಂದ, ಅಲ್ಪ ನೀರಿನಲ್ಲಿಯೇ ನಿರಂತರ ನೀರುಣಿಸಿ ಬೆಳೆಯನ್ನು ಉಳಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ.

ತಾಲೂಕಿನ ಬಂಗಾರಕ್ಕನ ಗುಡ್ಡದ ಸಮೀಪದ ರೈತ ಅಂಜಿನಪ್ಪ ಅವರು ಸುಮಾರು 2,000 ಸೇವಂತಿಗೆ ಗಿಡಗಳನ್ನು ನಾಟಿ ಮಾಡಿದ್ದು, ಕಳೆದ ಆರು ತಿಂಗಳಿನಿಂದ ಗಿಡಗಳನ್ನು ಆರೈಕೆ ಮಾಡಿಕೊಂಡು ಉತ್ತಮವಾಗಿ ಬೆಳೆಸಿದ್ದಾರೆ. ಇದೀಗ ಗಿಡಗಳು ಹೂ ಬಿಡುವ ಹಂತ ತಲುಪಿದ್ದು, ಮಾರುಕಟ್ಟೆಯಲ್ಲಿ ಉತ್ತಮ ದರ ಸಿಗುವ ನಿರೀಕ್ಷೆಯಲ್ಲಿದ್ದಾರೆ.

ದರದ ಏರಿಳಿತವೇ ರೈತನ ಆತಂಕ

ಸೇವಂತಿಗೆ ಹೂವಿನ ಬೆಳೆ ಕೈಹಿಡಿಯಬೇಕಾದರೆ ಮಾರುಕಟ್ಟೆ ದರ ಪ್ರಮುಖ ಪಾತ್ರ ವಹಿಸುತ್ತದೆ. ಕೆಲ ಸಂದರ್ಭದಲ್ಲಿ ಉತ್ತಮ ದರ ಸಿಕ್ಕರೆ ರೈತರ ಮುಖದಲ್ಲಿ ಸಂತಸ ಮೂಡುತ್ತದೆ. ಆದರೆ ಬೇಡಿಕೆ ಕಡಿಮೆಯಾದಾಗ ಅಥವಾ ಮಾರುಕಟ್ಟೆಯಲ್ಲಿ ಹೂವಿನ ಪೂರೈಕೆ ಹೆಚ್ಚಾದಾಗ ದರ ಕುಸಿಯುತ್ತದೆ.

> “ಹೂವಿನ ಬೆಳೆ ಉತ್ತಮ ಬೆಳೆ. ಆದರೆ ಉತ್ತಮ ದರ ದೊರೆತಾಗ ಮಾತ್ರ ರೈತರಿಗೆ ಅನುಕೂಲವಾಗುತ್ತದೆ. ಬೀಜ, ಗೊಬ್ಬರ, ಔಷಧೋಪಚಾರ ಸೇರಿದಂತೆ ಬೆಳೆಗಾಗಿ ಸಾಕಷ್ಟು ಹಣ ಖರ್ಚಾಗುತ್ತದೆ. ದರ ಕುಸಿದರೆ ಮಾಡಿದ ಖರ್ಚು ಕೂಡ ವಾಪಸ್ ಬರುವುದಿಲ್ಲ.”
> **––– ಮಾರಕ್ಕ, ರೈತ ಮಹಿಳೆ**

ಸದ್ಯ ಸೇವಂತಿಗೆ ಹೂವಿಗೆ ಗುಣಮಟ್ಟ ಹಾಗೂ ಮಾರುಕಟ್ಟೆಯ ಸ್ಥಿತಿಗನುಗುಣವಾಗಿ ಕೆಲ ಸಂದರ್ಭಗಳಲ್ಲಿ ಕೆ.ಜಿ.ಗೆ ಸುಮಾರು 20ರಿಂದ 100ರವರೆಗೆ ದರ ದೊರೆಯುತ್ತಿದೆ ಎಂದು ರೈತರು ಹೇಳುತ್ತಾರೆ. ದರದ ಈ ಏರಿಳಿತದಿಂದಾಗಿ ಹೂವಿನ ಕೃಷಿಯಲ್ಲೂ ಖಚಿತ ಆದಾಯದ ಭರವಸೆ ಇಲ್ಲದಂತಾಗಿದೆ.

ಸಾಲ ಮಾಡಿ ಬೆಳೆದ ಬೆಳೆಗೆ ದರದ ಭರವಸೆ ಬೇಕು

ಹೂವಿನ ಬೆಳೆ ಬೆಳೆಸುವುದು ಹೊರನೋಟಕ್ಕೆ ಸುಲಭವೆನಿಸಿದರೂ, ಅದರ ಹಿಂದೆ ರೈತರ ಶ್ರಮ ದೊಡ್ಡದು. ಬೀಜ ಅಥವಾ ಸಸಿ, ಗೊಬ್ಬರ, ಕೀಟನಾಶಕ, ಔಷಧೋಪಚಾರ, ನೀರಾವರಿ, ಕಾರ್ಮಿಕರ ಕೂಲಿ ಸೇರಿದಂತೆ ನಿರಂತರವಾಗಿ ವೆಚ್ಚ ಮಾಡಬೇಕಾಗುತ್ತದೆ.

ಸಾಲ–ಸೋಲ ಮಾಡಿ ಬಂಡವಾಳ ಹೂಡಿ ಬೆಳೆದ ಬೆಳೆಯು ಕೆಲವೊಮ್ಮೆ ಕೈಹಿಡಿದರೆ, ಮತ್ತೊಮ್ಮೆ ಕೈಬಿಡುತ್ತದೆ. ಉತ್ತಮ ದರ ಸಿಗದಿದ್ದರೆ ಉತ್ಪಾದನಾ ವೆಚ್ಚವೂ ವಾಪಸ್ ಬರದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಹೀಗಾಗಿ ಹೂವಿನ ಬೆಳೆಗಾರರಿಗೆ ಮಾರುಕಟ್ಟೆ ವ್ಯವಸ್ಥೆ ಹಾಗೂ ಸ್ಥಿರ ದರದ ಅಗತ್ಯವಿದೆ.



ಹೂವಿನ ಸುವಾಸನೆಯ ಹಿಂದೆ ಬೆವರಿನ ಕಥೆ

ಸೇವಂತಿಗೆ ಹೂವು ಮಾರುಕಟ್ಟೆಯಲ್ಲಿ ಜನರ ಕೈ ಸೇರುವ ಮುನ್ನ ರೈತನ ಹೊಲದಲ್ಲಿ ಹಲವು ತಿಂಗಳ ಶ್ರಮವನ್ನು ಕಂಡಿರುತ್ತದೆ. ಗಿಡ ನಾಟಿಯಿಂದ ಹಿಡಿದು ನೀರುಣಿಸುವುದು, ಕಳೆ ತೆಗೆಯುವುದು, ಔಷಧೋಪಚಾರ ಮಾಡುವುದು, ಹೂ ಕಟಾವು ಹಾಗೂ ಮಾರುಕಟ್ಟೆಗೆ ಸಾಗಿಸುವವರೆಗೆ ರೈತ ಕುಟುಂಬದ ಶ್ರಮ ನಿರಂತರ.

ಮಳೆ ಕೊರತೆಯ ಜಗಳೂರಿನಲ್ಲಿ ಕೊಳವೆಬಾವಿಯ ನೀರನ್ನು ನಂಬಿಕೊಂಡು ಹೂವಿನ ಕೃಷಿ ಮಾಡುತ್ತಿರುವ ರೈತರು, ಪ್ರಕೃತಿಯ ಸವಾಲಿನ ನಡುವೆಯೂ ಕೃಷಿ ಮೇಲಿನ ನಂಬಿಕೆಯನ್ನು ಬಿಟ್ಟಿಲ್ಲ. ಆದರೆ ಅವರ ಈ ಪ್ರಯತ್ನಕ್ಕೆ ಉತ್ತಮ ಮಾರುಕಟ್ಟೆ, ನ್ಯಾಯಯುತ ಬೆಲೆ ಮತ್ತು ಅಗತ್ಯ ತೋಟಗಾರಿಕೆ ಇಲಾಖೆಯ ಸಹಕಾರ ದೊರೆತಾಗ ಮಾತ್ರ ಹೂವಿನ ಕೃಷಿ ನಿಜವಾದ ಅರ್ಥದಲ್ಲಿ ರೈತರ ಬದುಕಿಗೆ ಆಧಾರವಾಗಲಿದೆ.

ಮಳೆ ಕೈಕೊಟ್ಟರೂ, ಮಣ್ಣಿನ ಮೇಲಿನ ನಂಬಿಕೆ ಕೈಬಿಡದ ರೈತನ ಹೊಲದಲ್ಲಿ ಸೇವಂತಿಗೆ ಹೂ ಅರಳುತ್ತಿದೆ. ಆ ಹೂವಿನ ಸುವಾಸನೆಯೊಂದಿಗೆ ರೈತನ ಬದುಕಿನ ಭರವಸೆಯೂ ಅರಳಬೇಕಿದೆ.

ಗಾಂಧಿ ಜಯಂತಿಗೆ ಸ್ವಚ್ಛತಾ ಅಭಿಯಾನ

ಅಧಿಕಾರಿಗಳ ಕಡ್ಡಾಯ ಪಾಲ್ಗೊಳ್ಳಲು ಸೂಚನೆ



“ಮುಂಜಾನೆಯ ಮೆರಗು”

ಜಗಳೂರು, ಸೆ.23– ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿ ಅಂಗವಾಗಿ ಅ.2ರಂದು ನಡೆಯಲಿರುವ ಸ್ವಚ್ಛತಾ ಅಭಿಯಾನದಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಿ ಸಾರ್ವಜನಿಕರಲ್ಲಿ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಬೇಕು ಎಂದು ತಹಶೀಲ್ದಾರ್ ಗುರುಬಸವರಾಜ್ ಸೂಚಿಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಅ.2ರಂದು ನಡೆಯಲಿರುವ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತ್ಯೋತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀ ಜಯಂತಿಯನ್ನು ಎಲ್ಲ ಸರ್ಕಾರಿ ಕಚೇರಿಗಳು, ಶಾಲಾ–ಕಾಲೇಜುಗಳು ಹಾಗೂ ವಿವಿಧ ಸಂಸ್ಥೆಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಬೇಕು. ಎರಡೂ ಮಹನೀಯರ ಭಾವಚಿತ್ರಗಳನ್ನು ಕಡ್ಡಾಯವಾಗಿ ಪ್ರತಿಷ್ಠಾಪಿಸಿ ಪುಷ್ಪಾರ್ಚನೆ ಸಲ್ಲಿಸಬೇಕು. ಜಯಂತಿಯ ಮಹತ್ವವನ್ನು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ತಿಳಿಸುವ ಮೂಲಕ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಪ್ರೇರೇಪಿಸಬೇಕು ಎಂದರು.

ಸಭೆಯಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಶ್ವೇತಾ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಮಹೇಶ್ವರಪ್ಪ ಹಾಗೂ ನಿತಿನ್ ಬಲ್ಲವರ್, ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ವೆಂಕಟೇಶ್, ಮುಖಂಡರಾದ ಕುಬೇಂದ್ರಪ್ಪ, ಕುರಿಜಯ್ಯಣ್ಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಶಾಲಾ ಆವರಣದಲ್ಲಿ ನೀರು ನಿಂತು ಮಕ್ಕಳ ಪರದಾಟ

ಸಮಸ್ಯೆ ಪರಿಹಾರಕ್ಕೆ ಎಸ್‌ಡಿಎಂಸಿ ಆಗ್ರಹ

“ಮುಂಜಾನೆಯ ಮೆರಗು”

ಜಗಳೂರು ಸೆ, 23– ತಾಲ್ಲೂಕಿನ ಗಡಿ ಭಾಗದಲ್ಲಿರುವ ಮಾಗಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಮಳೆನೀರು ನಿಂತು ಮಕ್ಕಳಿಗೆ ಶಾಲೆಗೆ ತೆರಳಲು ತೀವ್ರ ತೊಂದರೆಯಾಗುತ್ತಿದೆ. ಶಾಲಾ ಆವರಣದಲ್ಲಿ ದಿನಗಟ್ಟಲೆ ನೀರು ನಿಂತಿರುವ ಪರಿಣಾಮ ವಿದ್ಯಾರ್ಥಿಗಳು ಅದೇ ನೀರಿನಲ್ಲಿಯೇ ಕಾಲಿಟ್ಟು ತರಗತಿಗಳಿಗೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.



ಶಾಲೆಯ ಆವರಣದಲ್ಲಿ ನೀರು ಸರಾಗವಾಗಿ ಹರಿದು ಹೋಗಲು ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದಿರುವುದರಿಂದ ಮಳೆ ಬಂದಾಗಲೆಲ್ಲ ನೀರು ಸಂಗ್ರಹವಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಶಾಲೆಗೆ ಆಗಮಿಸುವ ಪೋಷಕರು ತೊಂದರೆ ಅನುಭವಿಸುವಂತಾಗಿದೆ. ನೀರಿನಲ್ಲಿ ನಡೆದುಕೊಂಡು ಹೋಗುವುದರಿಂದ ಮಕ್ಕಳ ಆರೋಗ್ಯದ ಮೇಲೂ ಪ್ರತಿಕೂಲ ಪರಿಣಾಮ ಬೀರುವ ಆತಂಕವನ್ನು ಖಆಒಐ ಸದಸ್ಯರು ವ್ಯಕ್ತಪಡಿಸಿದ್ದಾರೆ.

ಮಾಗಡಿ ಗ್ರಾಮವು ಜಗಳೂರು ತಾಲ್ಲೂಕಿನ ಗಡಿ ಭಾಗದಲ್ಲಿರುವುದರಿಂದ ಸಂಬಂಧಪಟ್ಟ (4ನೇ ಪುಟಕ್ಕೆ)

ಬರ ಪಟ್ಟಿಗೆ ಜಗಳೂರು ಸೇರ್ಪಡೆ: ‘ನನ್ನ ಪ್ರಯತ್ನಕ್ಕೆ ಫಲ’

2028 ನಾನೇ ಅಭ್ಯರ್ಥಿ, ಗೆದ್ದು ಸಚಿವನಾಗುವೆ: ಶಾಸಕ ದೇವೇಂದ್ರಪ್ಪ

“ಮುಂಜಾನೆಯ ಮೆರಗು”

ಜಗಳೂರು, ಸೆ.23– ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ರೈತರು ಸಂಕಷ್ಟಕ್ಕೆ ಸಿಲುಕಬಾರದು ಎಂಬ ಉದ್ದೇಶದಿಂದ ಸರ್ಕಾರ ಬರಪೀಡಿತ ತಾಲೂಕುಗಳನ್ನು ಘೋಷಣೆ ಮಾಡುತ್ತಿದೆ. ಭೌಗೋಳಿಕ ಹಾಗೂ ಇತರೆ ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ತಾಲೂಕುಗಳನ್ನು ಆಯ್ಕೆ ಮಾಡಲಾಗಿದ್ದು, ಮೊದಲ ಹಂತದಲ್ಲಿ ಜಗಳೂರು ತಾಲೂಕು ಪಟ್ಟಿಯಿಂದ ಹೊರಗುಳಿದಿತ್ತು. ಇದೀಗ ಸರ್ಕಾರದ ಅಂತಿಮ ಪಟ್ಟಿಯಲ್ಲಿ ಜಗಳೂರು ಸೇರ್ಪಡೆಯಾಗಿದೆ ಎಂದು ಶಾಸಕ ಬಿ.ದೇವೇಂದ್ರಪ್ಪ ತಿಳಿಸಿದರು.

ಪಟ್ಟಣದ ಕಾಂಗ್ರೆಸ್ ಕಚೇರಿ ಆವರಣದಲ್ಲಿ ಅಭಿಮಾನಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸಬೇಕು ಎಂಬ ವಿಚಾರದಲ್ಲಿ ಮುಖ್ಯಮಂತ್ರಿ, ಕಂದಾಯ ಮತ್ತು ಕೃಷಿ ಸಚಿವರು, ಇಲಾಖೆಯ ಆಯುಕ್ತರು ಹಾಗೂ ಕಾರ್ಯದರ್ಶಿಗಳನ್ನು ಹಲವು ಬಾರಿ ಭೇಟಿ ಮಾಡಿ ಮನವಿ ಮಾಡಿದ್ದೇನೆ ಎಂದರು.

ಮೊದಲ ಹಂತದಲ್ಲಿ ಜಗಳೂರು ಕೈತಪ್ಪಿದ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಮೇಲೂ ಅಸಮಾಧಾನ ವ್ಯಕ್ತಪಡಿಸಿದ್ದೆ. ಅಗತ್ಯವಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಹೇಳಿದ್ದೆ. ಕಳೆದ ವಾರ ಮುಖ್ಯಮಂತ್ರಿ ಹಾಗೂ ಸಚಿವರು ಬರ ಪಟ್ಟಿಗೆ ತಾಲೂಕು ಸೇರ್ಪಡೆ ಮಾಡುವ ಕುರಿತು ಭರವಸೆ ನೀಡಿದ್ದರು. ಸೆ.22ರಂದು ಶೇ.100ರಷ್ಟು ಭರವಸೆ ನೀಡಿದಂತೆ, ಇಂದು ಜಗಳೂರು ತಾಲೂಕನ್ನು ಪಟ್ಟಿಗೆ ಸೇರಿಸಲಾಗಿದೆ ಎಂದು ಹೇಳಿದರು.

ಮಾನದಂಡದ ವಿಳಂಬದಿಂದ ಸೇರ್ಪಡೆ ತಡ

ಬರಪೀಡಿತ ತಾಲೂಕುಗಳ ಆಯ್ಕೆ ಪ್ರಕ್ರಿಯೆಯಲ್ಲಿ ನಿಗದಿತ ಮಾನದಂಡಗಳು ಪ್ರಮುಖವಾಗಿವೆ. ಈ ಮಾನದಂಡಗಳ ಆಧಾರದ ಮೇಲೆ ಪರಿಶೀಲನೆ ನಡೆಯುತ್ತಿದ್ದ ಕಾರಣ ಜಗಳೂರು ಸೇರ್ಪಡೆ ವಿಳಂಬವಾಗಿದೆ. ನಿನ್ನೆ ಅಂತಿಮವಾಗಿ ತಾಲೂಕು ಬರ ಪಟ್ಟಿಗೆ ಸೇರ್ಪಡೆಯಾಗಿದ್ದು, ಇಂದು ಈ ವಿಚಾರವನ್ನು ಜನರ ಮುಂದೆ ಹೇಳುತ್ತಿದ್ದೇನೆ ಎಂದು ಶಾಸಕ ದೇವೇಂದ್ರಪ್ಪ ಸ್ಪಷ್ಟಪಡಿಸಿದರು.

ಮಾಜಿ ಶಾಸಕರ ವಿರುದ್ಧ ತೀವ್ರ ವಾಗ್ದಾಳಿ

ಬರಪೀಡಿತ ತಾಲೂಕು ಘೋಷಣೆ ವಿಚಾರದಲ್ಲಿ ರಾಜಕೀಯವಾಗಿ ಆರೋಪ–ಪ್ರತ್ಯಾರೋಪ ಮಾಡುತ್ತಿರುವ ಮಾಜಿ ಶಾಸಕರ ವಿರುದ್ಧ ಶಾಸಕ ದೇವೇಂದ್ರಪ್ಪ ತೀವ್ರ ವಾಗ್ದಾಳಿ ನಡೆಸಿದರು.

“ನಾನು ಬದುಕಿರುವಾಗಲೇ ನನ್ನ ಸಾಧನೆಗೆ ಚರ್ಮಗೀತೆ ಹಾಡಲು ಹೊರಟಿದ್ದಾರಲ್ಲ; ನಿಮ್ಮ ಸಾಧನೆ ಏನು?” ಎಂದು ಪ್ರಶ್ನಿಸಿದರು.

ಕ್ಷೇತ್ರದ ಅಭಿವೃದ್ಧಿಗೆ ಅಡ್ಡಿಪಡಿಸುವ ರಾಜಕೀಯ ಮಾಡಬಾರದು. ಕ್ಷೇತ್ರದ ಜನರಿಗೆ ಅನ್ಯಾಯವಾಗುವುದಾದರೆ ಯಾರೇ ಆಗಿದ್ದರೂ ಪ್ರಶ್ನಿಸುತ್ತೇನೆ. “ಕ್ಷೇತ್ರದ ಜನತೆಗೆ ಅನ್ಯಾಯವಾದರೆ ನನ್ನ ತಂದೆಯನ್ನೂ ಬಿಡುವುದಿಲ್ಲ” ಎಂದು ಅವರು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಜಗಳೂರು ತಾಲೂಕಿಗೆ ನ್ಯಾಯ ಒದಗಿಸುವ ಕೆಲಸ ಮಾಡಲಾಗಿದೆ ಎಂದರು.

ಬಂದ್ ವೇಳೆ ಸಾರ್ವಜನಿಕ ಆಸ್ತಿ ಹಾನಿಗೆ ಆಕ್ಷೇಪ

ಜಗಳೂರು ಬಂದ್ ಸಂದರ್ಭದಲ್ಲಿ ಸರ್ಕಾರಿ ಬಸ್‌ಗಳ ಕಿಟಕಿ ಗಾಜುಗಳಿಗೆ ಕಲ್ಲು ಹೊಡೆದು ಹಾನಿ ಮಾಡಿರುವ ಘಟನೆಗಳನ್ನು ಉಲ್ಲೇಖಿಸಿದ ಶಾಸಕ ದೇವೇಂದ್ರಪ್ಪ, ಶಾಂತಿಯುತವಾಗಿ ಪ್ರತಿಭಟನೆ ನಡೆಸುವಂತೆ ಮನವಿ ಮಾಡಿದ್ದರೂ ಸಾರ್ವಜನಿಕ ಆಸ್ತಿಗೆ ಹಾನಿ ಮಾಡುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು.



“ಸರಕಾರಿ ಆಸ್ತಿಗೆ ಬೆಂಕಿ ಹಚ್ಚಬೇಡಿ; ಸಮಸ್ಯೆಗಳಿದ್ದರೆ ನನ್ನ ಮೇಲೆ ಹೋರಾಟ ಮಾಡಿ. ಆದರೆ ಸಾರ್ವಜನಿಕ ಆಸ್ತಿಯನ್ನು ಹಾಳು ಮಾಡಬೇಡಿ” ಎಂದು ಮನವಿ ಮಾಡಿದರು.

‘ಡ್ರಿಂಕ್ ಅಂಡ್ ಡ್ರೈವ್’ ಆರೋಪಕ್ಕೆ ಸವಾಲು

ತಮ್ಮ ವಿರುದ್ಧ ಮಾಡಲಾಗುತ್ತಿರುವ ವೈಯಕ್ತಿಕ ಆರೋಪಗಳಿಗೆ ಪ್ರತಿಕ್ರಿಯಿಸಿದ ಶಾಸಕ ದೇವೇಂದ್ರಪ್ಪ, “ಡ್ರಿಂಕ್ ಅಂಡ್ ಡ್ರೈವ್ ಮಾಡುತ್ತೇನೆ ಎಂಬ ಆರೋಪವಿದ್ದರೆ ಮೂವರೂ ಪರೀಕ್ಷೆಗೆ ಒಳಗಾಗೋಣ. ನಮ್ಮ ದೇಹದಲ್ಲಿರುವ ರಕ್ತವನ್ನೇ ಪರೀಕ್ಷೆ ಮಾಡಿಸೋಣ” ಎಂದು ಸವಾಲು ಹಾಕಿದರು. ನಾನು ಮದ್ಯಪಾನವನ್ನು ಬಿಟ್ಟು ನಾಲ್ಕು ವರ್ಷಗಳಾಗಿವೆ ಎಂದು ಹೇಳಿದರು.

ಅಭಿವೃದ್ಧಿ ಕಾಮಗಾರಿಗಳ ಪ್ರಸ್ತಾಪ

ಕ್ಷೇತ್ರದಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪ್ರಸ್ತಾಪಿಸಿದ ಅವರು, ಸುಮಾರು 41 ಕೋಟಿ ವೆಚ್ಚದ ಆಸ್ಪತ್ರೆ ಕಾಮಗಾರಿ ಹಾಗೂ 220 ಕೆವಿ ವಿದ್ಯುತ್ ಯೋಜನೆಯ ಟೆಂಡರ್ ಪ್ರಕ್ರಿಯೆ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳು ಪ್ರಗತಿಯಲ್ಲಿವೆ ಎಂದರು.

ಜಗಳೂರು ತಾಲೂಕನ್ನು ಸಾಕ್ಷರತಾ ತಾಲೂಕನ್ನಾಗಿ ರೂಪಿಸುವ ಗುರಿಯೂ ಇದೆ. ಇಮಾಮ್ ಸಾಹೇಬ್ ಅವರ ಸಂಸ್ಥೆ ನೂರು ವರ್ಷ ಪೂರೈಸಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

“ನಾವು ಅಣ್ಣ–ತಮ್ಮಂದಿರಂತೆ ಕಿತ್ತಾಡುತ್ತಿದ್ದೇವೆ”

ರಾಜಕೀಯ ಭಿನ್ನಾಭಿಪ್ರಾಯಗಳ ನಡುವೆಯೂ ಕ್ಷೇತ್ರದ ಅಭಿವೃದ್ಧಿಗೆ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು. “ನಾವು ಅಣ್ಣ–ತಮ್ಮಂದಿರಂತೆ ಕಿತ್ತಾಡುತ್ತಿದ್ದೇವೆ. ಆದರೆ ಕ್ಷೇತ್ರದ ಹಿತದ ವಿಚಾರದಲ್ಲಿ ಒಂದಾಗಬೇಕು” ಎಂದು ಹೇಳಿದರು.

ಮುಂಬರುವ ಚುನಾವಣೆಯ ಸಂದರ್ಭದಲ್ಲಿ ರಾಜಕೀಯ ಮಾಡುವ ಬದಲು ಅಭಿವೃದ್ಧಿ ವಿಚಾರದಲ್ಲಿ ಸ್ಪರ್ಧೆ ಇರಲಿ ಎಂದು ಅ

ರೈತರಿಗೆ ನಿರಂತರ 6 ತಾಸು ಸಮರ್ಪಕ ವಿದ್ಯುತ್ ಹಾಗೂ ಕುಡಿಯುವ ನೀರು ಪೂರೈಕೆಗೆ ಆದ್ಯತೆ: ಶಾಮನೂರು ಟಿ.ಬಸವರಾಜಪ್ಪ ಶಾಮನೂರು



"ಮುಂಜಾನೆಯ ಮೆರಗು"

ದಾವಣಗೆರೆ, ಸೆ. 23– ಜಿಲ್ಲೆಯಲ್ಲಿ ಎದುರಾಗಿರುವ ಬರಗಾಲದ ಛಾಯೆ, ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆ, ಕುಡಿಯುವ ನೀರಿನ ಅಭಾವ ಹಾಗೂ ನಾಲೆಯ ನೀರಿನ ಸದ್ಬಳಕೆ ಆಗಬೇಕು, ಬೆಸ್ಕಾಂ ಅಧಿಕಾರಿಗಳು ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ರೈತರ ಬೆಳೆಗಳಿಗೆ ಕನಿಷ್ಠ 6 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ನೀಡಲು ಶ್ರಮಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು ಟಿ.ಬಸವರಾಜಪ್ಪ ಅವರು ತಿಳಿಸಿದರು.

ಅವರು ಮಂಗಳವಾರ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚನ್ನಗಿರಿ, ಮಾಯಕೊಂಡ, ದಾವಣಗೆರೆ ದಕ್ಷಿಣ ಸೇರಿದಂತೆ ಈ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟ ಕುಸಿದಿದ್ದು, ಬೋರ್‌ವೆಲ್‌ಗಳು ಬತ್ತಿ ಹೋಗುತ್ತಿವೆ. ನಾಲೆಗಳಲ್ಲಿ ನೀರು ಹರಿಯುವುದರಿಂದ ಸುತ್ತಮುತ್ತಲಿನ ಬೋರ್‌ವೆಲ್‌ಗಳು ಮರುಪೂರಣಗೊಳ್ಳುತ್ತಿದ್ದು, ಗ್ರಾಮಗಳಿಗೆ ಕುಡಿಯುವ ನೀರಿನ ಅಭಾವ ತಪ್ಪಿಸಲು ಇದು ಅತ್ಯಂತ ಅಗತ್ಯವಾಗಿದೆ. ಕುಡಿಯುವ ನೀರಿನ ಯೋಜನಾ ಬೋರ್‌ವೆಲ್‌ಗಳಿಗೆ ಹಾಗೂ ಸಾರ್ವಜನಿಕ ನೀರಿನ ಪೂರೈಕೆಗೆ ಯಾವುದೇ ಅಡೆತಡೆಯಿಲ್ಲದೆ ವಿದ್ಯುತ್ ನೀಡುವುದು ಪ್ರಥಮ ಆದ್ಯತೆಯಾಗಬೇಕು ಎಂದು ಬೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಾಲೆಗಳಿಂದ ಅಧಿಕ ಪ್ರಮಾಣದ ಅಕ್ರಮ ಪಂಪ್‌ಸೆಟ್‌ಗಳ (20 ಹೆಚ್.ಪಿ ಮೋಟಾರ್‌ಗಳು) ಮೂಲಕ ನೀರು ಎತ್ತುವುದರಿಂದ, ನಾಲೆಯ ಕೊನೆಯ ಭಾಗದ ಅಧಿಕೃತ ಅಚ್ಚುಕಟ್ಟುದಾರರಿಗೆ ನೀರು ತಲುಪುತ್ತಿಲ್ಲ ಎಂದು ತಿಳಿಸಿದರು.

ಬೆಸ್ಕಾಂ ಅಧೀಕ್ಷಕರಾದ ತಿಪ್ಪೇಸ್ವಾಮಿ ಅವರು ಮಾತನಾಡಿ, ಗಾಳಿ ಮತ್ತು ಸೌರ ವಿದ್ಯುತ್ ಉತ್ಪಾದನೆಯಲ್ಲಿ ಉಂಟಾಗುತ್ತಿರುವ ಏರಿಳಿತ ಹಾಗೂ ಸ್ಟೇಷನ್ ಮತ್ತು ಲೈನ್‌ಗಳ ಮೇಲಿನ ಶೇಖರಣಾ ಒತ್ತಡದಿಂದಾಗಿ ವಿದ್ಯುತ್ ವಿತರಣೆಯಲ್ಲಿ ಕೆಲ ತಾಂತ್ರಿಕ ತೊಡಕುಗಳು ಎದುರಾಗಿವೆ. ಸದ್ಯ ಲಭ್ಯವಿರುವ ಮಾರ್ಗಗಳಲ್ಲಿ ಪ್ರತಿದಿನ 6 ಗಂಟೆಗಳ ಕಾಲ ವಿದ್ಯುತ್ ನೀಡಲಾಗುತ್ತಿದ್ದು, ಸಮಸ್ಯೆಯಿರುವ ಕೆಲವು ಉಪಕೇಂದ್ರಗಳ ವ್ಯಾಪ್ತಿಯಲ್ಲಿ 5 ರಿಂದ 5.30 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ರಾಜ್ಯಾದ್ಯಂತ ಕಳೆದ ಏಪ್ರಿಲ್ ತಿಂಗಳಿಗೆ ಹೋಲಿಸಿದರೆ ವಿದ್ಯುತ್ ಬೇಡಿಕೆಯು 12000 – 15000 ಮೆಗಾವ್ಯಾಟ್‌ನಿಂದ 20000 ಮೆಗಾವ್ಯಾಟ್‌ಗೆ ಏರಿಕೆಯಾಗಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಸಾಹಿತ್ಯ ಎಂ.ಆಲದಕಟ್ಟಿ ಅವರು ಮಾತನಾಡಿ, ಚನ್ನಗಿರಿ ಪಟ್ಟಣದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಸುಸಜ್ಜಿತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ ನಿರ್ಮಾಣಕ್ಕೆ ಅಗತ್ಯವಿರುವ ಜಮೀನನ್ನು 'ನೇರ ಖರೀದಿ ಕರಾರು' ವಿಧಾನದ ಮೂಲಕ ಅತ್ಯಂತ ಕಡಿಮೆ ಅವಧಿಯಲ್ಲಿ ವಶಪಡಿಸಿಕೊಳ್ಳಲು ಕ್ರಮ ವಹಿಸುವಂತೆ ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಸೂಚನೆ ನೀಡಿದರು.

ಚನ್ನಗಿರಿಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣವಿಲ್ಲದೆ, ಖಾಸಗಿ ಬಸ್ ನಿಲ್ದಾಣದ ಬಳಿಯೇ ಸರ್ಕಾರಿ ಬಸ್‌ಗಳು ಸಂಚರಿಸುತ್ತಿರುವುದರಿಂದ ಸಾರ್ವಜನಿಕರಿಗೆ ಹಾಗೂ ಚಾಲಕ-ನಿರ್ವಾಹಕರಿಗೆ ಗೊಂದಲ ಉಂಟಾಗುತ್ತಿದೆ. ಈ ಸಮಸ್ಯೆಯನ್ನು ತಾತ್ಕಾಲಿಕವಾಗಿ ಪರಿಹರಿಸಲು ಸಿಬ್ಬಂದಿ/ಪೋಲೀಸ್ ಸಿಬ್ಬಂದಿ ನೇಮಿಸಿ ಸಂಚಾರ ಸುಗಮಗೊಳಿಸುವುದು ಸೇರಿದಂತೆ ಶಾಶ್ವತ ಬಸ್ ನಿಲ್ದಾಣ ನಿರ್ಮಾಣದ ಜಮೀನು ಸ್ವಾಧೀನಕ್ಕೆ ಅಗತ್ಯ ಕ್ರಮವಹಿಸುವಂತೆ ಸೂಚನೆ ನೀಡಿದರು.

ಭೂಸ್ವಾಧೀನ ಕಾಯ್ದೆ 2013ರ ಸುದೀರ್ಘ ಪ್ರಕ್ರಿಯೆಗೆ ಕಾಯುವ ಬದಲು, ನೇರ ಖರೀದಿ ಕರಾರಿನ ಮೂಲಕ 15 ದಿನಗಳಿಂದ 1 ತಿಂಗಳ ಅವಧಿಯಲ್ಲಿ ಜಮೀನು ಸ್ವಾಧೀನಪಡಿಸಿಕೊಳ್ಳಲು ಅವಕಾಶವಿದೆ. ಈ ವಿಧಾನದಲ್ಲಿ ಭೂಮಾಲೀಕರಿಗೆ ಕಾಯ್ದೆಯನ್ವಯ ದೊರೆಯುವಷ್ಟೇ ಸೂಕ್ತ ಪರಿಹಾರದ ಮೊತ್ತ ಏಕಗಂಟಿನಲ್ಲಿ ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮೆಯಾಗಲಿದೆ. ಜೊತೆಗೆ, ಮುಂದಿನ ಜಮೀನು ಖರೀದಿಗೆ ಮುದ್ರಾಂಕ ಶುಲ್ಕ ವಿನಾಯಿತಿ ಸೌಲಭ್ಯವೂ ಸಿಗಲಿದ್ದು, ಕೋರ್ಟ್-ಕಚೇರಿ ಅಲೆದಾಟ ತಪ್ಪಲಿದೆ ಎಂದರು.

ಕೆಎಸ್‌ಆರ್‌ಟಿಸಿ ಮತ್ತು ಇಲಾಖೆಯ ಅಧಿಕಾರಿಗಳು ಜಮೀನಿನ ಮಾಲೀಕರನ್ನು ವೈಯಕ್ತಿಕವಾಗಿ ಭೇಟಿಯಾಗಿ, ನೇರ ಖರೀದಿಯ ಅನುಕೂಲಗಳನ್ನು ಮನವರಿಕೆ ಮಾಡಿ ಒಪ್ಪಿಗೆ ಪಡೆಯುವಂತೆ ಸೂಚಿಸಿ, ಈ ಪ್ರಕ್ರಿಯೆಯ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಉಪವಿಭಾಗಾಧಿಕಾರಿಗಳೊಂದಿಗೆ ಚರ್ಚಿಸಿ, ಕಡತವನ್ನು ಶೀಘ್ರ ವಿಲೇವಾರಿ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿಗಳ ನಿರ್ದೇಶನದಂತೆ 'ಭಾರತ ಜೋಡೋ ಯುವ ಸಂಘ' ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ರಾಜ್ಯದಿಂದ ಬಂದಿರುವ ವಿಶೇಷ ಕೋಡ್ ಮತ್ತು ಸಂಖ್ಯೆ ಹೊಂದಿರುವ ಅರ್ಜಿ ನಮೂನೆಗಳನ್ನು ಮುದ್ರಿಸಿ, ಪ್ರತಿಯೊಂದು ಗ್ರಾಮಗಳಿಗೂ ವಿತರಿಸಲಾಗುತ್ತಿದೆ. ಈ ನಮೂನೆಗಳು ಯೂನಿಕ್ ಆಗಿರುವುದರಿಂದ ಇವುಗಳನ್ನು ಜಾಗರೂಕತೆಯಿಂದ ಹಂಚಿಕೆ ಮಾಡಿ, ಭರ್ತಿ ಮಾಡಿದ ಅರ್ಜಿಗಳನ್ನು ಜವಾಬ್ದಾರಿಯಿಂದ ವಾಪಸ್ ಸಂಗ್ರಹಿಸಲು ಗ್ಯಾರಂಟಿ ಸಮಿತಿಯ ಸದಸ್ಯರು ಶ್ರಮಿಸಬೇಕು. ಈ ಯೋಜನೆಗೆ ಅಕ್ಟೋಬರ್ 2 ರೊಳಗೆ ಚಾಲನೆ ನೀಡಲು ಮುಖ್ಯಮಂತ್ರಿಗಳು ತೀರ್ಮಾನಿಸಿದ್ದು, ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಸೂಚಿಸಿದರು.

ಸಮಿತಿ ಸದಸ್ಯರಾದ ಡೋಲಿ ಚಂದ್ರು ಅವರು ಮಾತನಾಡಿ, ಬಸ್ ನಿಲ್ದಾಣದಲ್ಲಿ ಭದ್ರತೆ ಮತ್ತು ಸಿಸಿಟಿವಿ ಕೊರತೆ ಇದೆ. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಸಿಸಿಟಿವಿ ಕ್ಯಾಮೆರಾಗಳಿದ್ದರೂ ಆಪರೇಟರ್‌ಗಳಿಲ್ಲದೆ ನಿಷ್ಕ್ರಿಯಗೊಂಡಿದೆ. ರಾತ್ರಿ ವೇಳೆ ಮಹಿಳೆಯರ ಸುರಕ್ಷತೆ, ಪುಂಡ-ಪೋಲಿಗಳ ಹಾವಳಿ ನಿಯಂತ್ರಣಕ್ಕೆ ಸಿಸಿಟಿವಿ ನಿರ್ವಹಣೆ ಮತ್ತು ಪೊಲೀಸ್ ಗಸ್ತು ಹೆಚ್ಚಿಸಲು ಕ್ರಮವಹಿಸಬೇಕು , ಬಸ್ ನಿಲ್ದಾಣದ ಶೌಚಾಲಯದಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ಹಣ ವಸೂಲಿ ಮಾಡುತಿದ್ದಾರೆ. ಶೌಚಾಲಯಗಳಲ್ಲಿ ಮಹಿಳಾ ಸಿಬ್ಬಂದಿಯನ್ನು ನೇಮಿಸುವಂತೆ ಹಾಗೂ ಹೆಚ್ಚಿನ ದರ ವಸೂಲಿ ತಡೆಯುವಂತೆ ಸಭೆಯ ಗಮನಕ್ಕೆ ತಂದರು.

ಅನ್ನಭಾಗ್ಯ: ಜಿಲ್ಲೆಯಲ್ಲಿ ಜುಲೈ –2023 ರಿಂದ ಡಿಸೆಂಬರ್ 2024 ರ ಅಂತ್ಯದ ವರೆಗೆ ಒಟ್ಟು 346.33 ಕೋಟಿ ಹಣವನ್ನು ಡಿಬಿಟಿ



ಮುಖಾಂತರ 1242812 ಫಲಾನುಭವಿಗಳ ಖಾತೆಗಳಿಗೆ ವರ್ಗಾಯಿಸಲಾಗಿರುತ್ತದೆ. ಫೆಬ್ರವರಿ 2025 ರಿಂದ ಸೆಪ್ಟೆಂಬರ್ 2026 ರ ಅಂತ್ಯದ ವರೆಗೆ ಪ್ರತಿ ಫಲಾನುಭವಿಗಳಿಗೆ ಹೆಚ್ಚುವರಿಯಾಗಿ 5 ಕೆ.ಜಿ. ಅಕ್ಕಿಯನ್ನು ವಿತರಿಸಲಾಗಿದ್ದು ಸೆಪ್ಟೆಂಬರ್ 2026 ರ ಅಂತ್ಯಕ್ಕೆ ಒಟ್ಟು 1139749 ಫಲಾನುಭವಿಗಳಿಗೆ 1193500 ಕ್ವಿಂಟಾಲ್ ಅಕ್ಕಿಯನ್ನು ಫಲಾನುಭವಿಗಳಿಗೆ ಉಚಿತವಾಗಿ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಶೇ. 52 ರಷ್ಟು ಇ-ಕೆವೈಸಿ ಪೂರ್ಣಗೊಂಡಿದ್ದು ರಾಜ್ಯದಲ್ಲಿ 7 ನೇ ಸ್ಥಾನದಲ್ಲಿದ್ದೇವೆ, ನಿಗದಿತ ಅವಧಿಯೊಳಗೆ ಇ-ಕೆವೈಸಿ ಕಾರ್ಯ ಪೂರ್ಣಗೊಳಿಸುತ್ತೇವೆ ಎಂದು ಆಹಾರ ಇಲಾಖೆಯ ಜಂಟಿ ನಿರ್ದೇಶಕ ಮಧುಸೂಧನ್ ಅವರು ಸಭೆಗೆ ಮಾಹಿತಿ ನೀಡಿದರು.

ಗೃಹಲಕ್ಷ್ಮಿ: ಜಿಲ್ಲೆಯಲ್ಲಿ ಆಗಸ್ಟ್ 2023 ರಿಂದ ಜೂನ್ 2026 ರವರೆಗೆ 352521 ಫಲಾನುಭವಿಗಳಿಗೆ ರೂ. 2264.33 ಕೋಟಿ ಹಣ ಪಾವತಿಸಲಾಗಿದೆ. ಜಿಲ್ಲೆಯಲ್ಲಿ ಯಾವುದೇ ಒಬ್ಬ ವ್ಯಕ್ತಿಗೆ ಎರಡು ಬಾರಿ ಹಣ ಸಂದಾಯವಾಗಿಲ್ಲವೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ್ ಸಭೆಗೆ ತಿಳಿಸಿದರು.

ಗೃಹಜ್ಯೋತಿ : ಜಿಲ್ಲೆಯಲ್ಲಿ ಈ ಯೋಜನೆಯಡಿ ಜಿಲ್ಲೆಯಲ್ಲಿ ಆಗಸ್ಟ 2026 ರ ಮಾಹೆಯಲ್ಲಿ ಒಟ್ಟು 512933 ಫಲಾನುಭವಿಗಳಿಗೆ 4336.61 ಮೊತ್ತವನ್ನು ಹೊಂದಾಣಿಕೆ ಮಾಡಲಾಗಿದೆ ಹಾಗೂ ಮನೆ ಮನೆ ಭೇಟಿ ಕಾರ್ಯ ಶೇ. 92 ರಷ್ಟು ಪೂರ್ಣಗೊಂಡಿದ್ದು ಇನ್ನು 26000 ಮನೆಗಳು ಬಾಕಿ ಇವೆ ಎಂದು ಬೆಸ್ಕಾಂ ಇಇ ತಿಪ್ಪೇಸ್ವಾಮಿ ಅವರು ಸಭೆಗೆ ತಿಳಿಸಿದರು.

ಶಕ್ತಿ ಯೋಜನೆ : ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ 16.44 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದು ಇದರಿಂದ ರೂ. 490.27 ಕೋಟಿ ಪ್ರಯಾಣ ದರ ಆಗಿದೆ ಎಂದು ಕೆ.ಎಸ್.ಆರ್.ಟಿ.ಸಿ ವಿಭಾಗೀಯ ನಿಯಂತ್ರಕ ಗಿರೀಶ್ ಅವರು ತಿಳಿಸಿದರು.

ಯುವನಿಧಿ ಯೋಜನೆ : ಜಿಲ್ಲೆಯ 14532 ಪದವಿ ಫಲಾನುಭವಿಗಳಿಗೆ ತಲಾ ರೂ. 3000.00 ಗಳಂತೆ ಹಾಗೂ 347 ಡಿಪ್ಲೊಮೋ ಫಲಾನುಭವಿಗಳಿಗೆ ತಲಾ ರೂ. 1500.00 ಗಳಂತೆ ರೂ. 42.70 ಲಕ್ಷಗಳನ್ನು ಹೀಗೆ ಒಟ್ಟು 14879 ಫಲಾನುಭವಿಗಳಿಗೆ ರೂ. 48.27 ಕೋಟಿ ಗಳನ್ನು ಪಾವತಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯಾಧಿಕಾರಿ ರವೀಂದ್ರ ಅವರು ಸಭೆಗೆ ತಿಳಿಸಿದರು.

ಸಮಿತಿಯ ಉಪಾಧ್ಯಕ್ಷರಾದ ಮಂಜುನಾಥ್, ನಂಜಾನಾಯ್ಕ್, ರಾಜೇಶ್ವರಿ, ಅನೀಶ್ ಪಾಶ, ಸದಸ್ಯರುಗಳಾದ ಡೋಲಿ ಚಂದ್ರು, ಶಶಿಕಲಾ, ನಾಗರಾಜ್, ಗಿರೀಶ್, ಲಿಯಾಕತ್ ಆಲಿ, ಉಮೇಶ್, ಷಂಷೀರ್ ಅಹ್ಮದ್, ಶಿವರಾಮ್ ನಾಯಕ್, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್ , ಸಿಪಿಒ ಮಲ್ಲಾನಾಯಕ್ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಪೌರಕಾರ್ಮಿಕರ ಶ್ರಮದಿಂದ ನಗರಕ್ಕೆ ಪ್ರಶಸ್ತಿ- ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಪ್ರಮುಖ ಶಕ್ತಿ ಪೌರಕಾರ್ಮಿಕರು: ಜಿಲ್ಲಾಧಿಕಾರಿಗಂಗಾಧರ ಸ್ವಾಮಿಜಿ.ಎಂ



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 23– ದಾವಣಗೆರೆ ನಗರವು ಸ್ವಚ್ಛತೆಯಲ್ಲಿರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿ ಹಾಗೂ ಗೌರವ ಪಡೆಯಲು ಪೌರಕಾರ್ಮಿಕರ ಶ್ರಮವೇ ಮೂಲ ಕಾರಣ. ರೈತರ ನಂತರ ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಪ್ರಮುಖ ಶಕ್ತಿ ಎಂದರೆ ಪೌರಕಾರ್ಮಿಕರು ಎಂದು ಜಿಲ್ಲಾಧಿಕಾರಿಗಂಗಾಧರ ಸ್ವಾಮಿ ಜಿ ಎಂ ಅವರು ತಿಳಿಸಿದರು.

ಅವರು ಬುಧವಾರ ಮಹಾನಗರ ಪಾಲಿಕೆ ವತಿಯಿಂದ ನಗರದ ಶ್ರೀಮದ್ ಅಭಿನವರೇಣುಕಾ ಮಂದಿರದಲ್ಲಿ ಏರ್ಪಡಿಸಿದ್ದ ಪೌರಕಾರ್ಮಿಕರ ದಿನಾಚರಣೆ-2026 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾಗರಿಕರ ಆರೋಗ್ಯ ಹಾಗೂ ನಗರದ ನೈರ್ಮಲ್ಯವನ್ನುಕಾಪಾಡಲು ಪ್ರತಿದಿನ ಮುಂಜಾನೆ 2:30 ರಿಂದಲೇ ಕುಟುಂಬವನ್ನು ತೊರೆದು ಶ್ರಮಿಸುವ ನಿಮ್ಮ ಸೇವೆ ಅನನ್ಯವಾಗಿದೆ ಹಾಗೂ ಅವರ ಸರ್ವಾಂಗೀಣಅಭಿವೃದ್ಧಿಗೆಅಗತ್ಯವಿರುವಎಲ್ಲಾ ನೆರವು ನೀಡಲು ಮಹಾನಗರ ಪಾಲಿಕೆ ಮತ್ತು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆಎಂದರು.

ಪೌರಕಾರ್ಮಿಕರು ತಮ್ಮ ಕುಟುಂಬ ಮತ್ತು ಮಕ್ಕಳ ಹಿತದೃಷ್ಟಿಯಿಂದ ದುಶ್ಚಟಗಳಿಂದ ದೂರವಿದ್ದು, ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಪಾಲಿಕೆ ವತಿಯಿಂದ ನಿರಂತರ ಆರೋಗ್ಯ ತಪಾಸಣೆ, ಶುಚಿತ್ವ ಕಾಪಾಡಿಕೊಳ್ಳಲು ಶೂ, ಸಮವಸ್ತ್ರ, ಬೆಳಗಿನ ಉಪಹಾರ, ವಿಶೇಷ ಭತ್ಯೆ ಹಾಗೂ ಕ್ರೀಡಾ ಚಟುವಟಿಕೆಗಳ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಪೌರಕಾರ್ಮಿಕರುತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಉತ್ತಮ ವಿದ್ಯಾಭ್ಯಾಸ ಕೊಡಿಸಬೇಕು. ಮಕ್ಕಳು ಉನ್ನತ ಮಟ್ಟಕ್ಕೆ ಬೆಳೆಯಬೇಕೆಂಬುದು ಸರ್ಕಾರದ ಆಶಯವಾಗಿದೆ ಪೌರಕಾರ್ಮಿಕರ ಮಕ್ಕಳು ಉನ್ನತ ಶಿಕ್ಷಣ ಪಡೆದು ಸಮಾಜದಲ್ಲಿ ದೊಡ್ಡದೊಡ್ಡ ಹುದ್ದೆಗಳನ್ನು ಅಲಂಕರಿಸಬೇಕು, ಈಗಾಗಲೇ ಪಾಲಿಕೆ ವತಿಯಿಂದ ಪೌರಕಾರ್ಮಿಕರ ಮಕ್ಕಳಿಗೆ ಲ್ಯಾಪ್‌ಟ್ಯಾಪ್ ವಿತರಣೆ ಸೇರಿದಂತೆ ಶೈಕ್ಷಣಿಕ ಪ್ರೋತ್ಸಾಹ ನೀಡಲಾಗುತ್ತಿದೆಎಂದು ತಿಳಿಸಿದರು.

ಪೌರಕಾರ್ಮಿಕರನ್ನು ಖಾಯಂಗೊಳಿಸುವ ಹಾಗೂ ನೇರ ಪಾವತಿ ವ್ಯಾಪ್ತಿಗೆತರುವ ನೆಪದಲ್ಲಿ ಕೆಲವು ಮಧ್ಯವರ್ತಿಗಳು ಮತ್ತು ಅನಧಿಕೃತ ಏಜೆಂಟ್‌ಗಳು ಸಾರ್ವಜನಿಕರಿಂದ ಹಾಗೂ ಪೌರಕಾರ್ಮಿಕರಿಂದ ಹಣ ವಸೂಲಿ ಮಾಡುತ್ತಿರುವ ದೂರುಗಳು ಕೇಳಿಬಂದಿವೆ. ಈ ಕುರಿತು ಈಗಾಗಲೇ ಪೋಲಿಸ್ ಇಲಾಖೆಗೆ ಲಿಖಿತದೂರು ನೀಡಲಾಗಿದ್ದು, ಸಮಗ್ರತನಿಖೆ ನಡೆಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ. ನೇರ ಪಾವತಿ ಹಾಗೂ ಹುದ್ದೆಗಳ ಭರ್ತಿ ಪ್ರಕ್ರಿಯೆಯನ್ನುಅತ್ಯಂತ ಪಾರದರ್ಶಕವಾಗಿ ಮತ್ತು ನಿಷ್ಪಕ್ಷಪಾತವಾಗಿ ನಡೆಸಲಾಗುವುದುಎಂದು ತಿಳಿಸಿದರು.

ಮ್ಯಾನ್‌ಹೋಲ್ ಹಾಗೂ ಚರಂಡಿಗಳಿಗೆ ಭೌತಿಕವಾಗಿ ಇಳಿದು ಸ್ವಚ್ಛಗೊಳಿಸುವ (ಮ್ಯಾನುಯಲ್ ಸ್ಕ್ಯಾವೆಂಜಿಂಗ್) ಕಾರ್ಯವನ್ನು ಸರ್ಕಾರಕಟ್ಟುನಿಟ್ಟಾಗಿ ನಿಷೇಧಿಸಿದೆ. ಮ್ಯಾನ್‌ಹೋಲ್‌ಗಳಲ್ಲಿ ಅಪಾಯಕಾರಿ ಮಿಥೇನ್ ಅನಿಲ, ಆಮ್ಲಜನಕದ ಅಭಾವ ಹಾಗೂ ರೋಗಕಾರಕ ಬ್ಯಾಕ್ಟೀರಿಯಾಗಳಿರುವುದರಿಂದ ಜೀವಕ್ಕೆ ಕಂಠಕವಿದೆ. ಆದ್ದರಿಂದ ಯಾರೂ ಇಂತಹ ದುಸ್ಸಾಹಸಕ್ಕೆ ಕೈ ಹಾಕಬಾರದು. ಸ್ವಚ್ಛತಾ ಕಾರ್ಯಕ್ಕೆ ಜೇಟಿಂಗ್ ಮೆಷಿನ್ ಸೇರಿದಂತೆ ಲಭ್ಯವಿರುವಆಧುನಿಕ ಯಂತ್ರೋಪಕರಣಗಳನ್ನು ಮಾತ್ರ ಬಳಸಬೇಕು ಎಂದು ತಿಳಿಸಿದರು

ದೈಹಿಕ, ಮಾನಸಿಕ ಆರೋಗ್ಯ ಹಾಗೂ ಶಿಸ್ತನ್ನು ಕಾಯ್ದುಕೊಳ್ಳುವ ಮೂಲಕ ಪೌರ ಕಾರ್ಮಿಕರು ತಮ್ಮ ಕುಟುಂಬದ ಭವಿಷ್ಯ ರೂಪಿಸಿಕೊಳ್ಳುವುದರ ಜೊತೆಗೆ ಸ್ವಚ್ಛದಾವಣಗೆರೆ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಪೌರಕಾರ್ಮಿಕರನ್ನು ಹಾಗೂ ಎಸ್.ಎಸ್.ಎಲ್.ಸಿ, ಪಿಯುಸಿ ಯಲ್ಲಿಅತಿ ಹೆಚ್ಚು ಅಂಕಪಡೆದ ಪೌರಕಾರ್ಮಿಕರ ಮಕ್ಕಳನ್ನು ಸನ್ಮಾಯಿಸಲಾಯಿತು,

ಪಾಲಿಕೆ ಆಯುಕ್ತ ಮಹಾಂತೇಶ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪರಮೇಶ್ವರ ಹೆಗಡೆ, ದುಡಾ-ಆಯುಕ್ತೆ ರೇಣುಕಾ, ಕಾರ್ಯಪಾಲಕ ಅಭಿಯಂತರ ಉದಯ್ ಪೌರಕಾರ್ಮಿಕ ಮುಖಂಡರುಗಳು ಹಾಗೂ ಪಾಲಿಕೆಯ ಹಿರಿಯ ಅಧಿಕಾರಿಗಳು ಪೌರಕಾರ್ಮಿಕರು, ಸಿಬ್ಬಂದಿ ಮತ್ತು ಉಪಸ್ಥಿತರಿದ್ದರು.

ಖಾಲಿ ಜೊಂಬು, ಚಿಪ್ಪು ಹಿಡಿದು ವಿಪಕ್ಷ ಸದಸ್ಯರ ಪ್ರತಿಭಟನೆ



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.23– ರಾಜ್ಯ ಸರ್ಕಾರದ ಆರ್ಥಿಕ ನಿರ್ವಹಣೆಯನ್ನು ಪ್ರಶ್ನಿಸಿ ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಖಾಲಿ ಜೊಂಬು ಹಾಗೂ ತೆಂಗಿನಕಾಯಿ ಚಿಪ್ಪುಗಳನ್ನು ಪ್ರದರ್ಶಿಸಿ ಪ್ರತಿಭಟನೆ ನಡೆಸಿದರು.

ರಾಜ್ಯದ ಖಜಾನೆ

ರಾಜ್ಯದ ಪ್ರತಿ ತಾಲ್ಲೂಕಿನಲ್ಲಿ 20 ಎಕರೆ ಕೈಗಾರಿಕಾ ಪ್ರದೇಶ ಸ್ಥಾಪನೆ : ಸಚಿವ ಕಾಶಪ್ಪನವರ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.23– ರಾಜ್ಯದ ಪ್ರತಿಯೊಂದು ತಾಲ್ಲೂಕಿನಲ್ಲಿ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ತಕ್ಷಣವೇ ಕನಿಷ್ಠ 20 ಎಕರೆ ಪ್ರದೇಶದಲ್ಲಿ ಕೈಗಾರಿಕಾ ಪ್ರದೇಶ (ಇಂಡಸ್ಟ್ರಿಯಲ್ ಪಾರ್ಕ್) ಸ್ಥಾಪಿಸಬೇಕೆಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವ ವಿಜಯಾನಂದ ಕಾಶಪ್ಪನವರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನಿನ್ನೆ ವಿಕಾಸಸೌಧದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ಯಮ ವಲಯದ ಹೆಚ್ಚುವರಿ ನಿರ್ದೇಶಕರು ಮತ್ತು ಜಂಟಿ ನಿರ್ದೇಶಕರ ಸಭೆ ನಡೆಸಿದ ಅವರು, ತಾಲ್ಲೂಕು ಕೇಂದ್ರಗಳಲ್ಲಿ ಲಭ್ಯವಿರುವ ಕಡೆ ಜಮೀನುಗಳನ್ನು ಗುರುತಿಸಿ, ಅಗತ್ಯವಿದ್ದಲ್ಲಿ ಭೂಸ್ವಾಧೀನ ಮಾಡಿಕೊಂಡು ಕನಿಷ್ಠ 20 ಎಕರೆ ಪ್ರದೇಶದಲ್ಲಿ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಬೇಕು. ಇದರಿಂದ ಸಣ್ಣ ಕೈಗಾರಿಕಾ ಉದ್ಯಮಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಿ, ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿದರೆ ಉದ್ಯಮಿಗಳು ಮುಂದೆ ಬಂದು ಕೈಗಾರಿಕೆಗಳನ್ನು ಸ್ಥಾಪಿಸಲಿದ್ದಾರೆ. ಇದರಿಂದ ಸ್ಥಳೀಯರು ಹಾಗೂ ಯುವಕರಿಗೆ ಉದ್ಯೋಗ ದೊರೆಯಲಿದೆ ಎಂದು ತಿಳಿಸಿದರು.

ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸುವಾಗ ರೈತರ ಜಮೀನನ್ನು ಯಾವುದೇ ಕಾರಣಕ್ಕೂ ಭೂಸ್ವಾಧೀನ ಮಾಡಿಕೊಳ್ಳಬಾರದು. ಯಾರು ಸ್ವಯಂಪ್ರೇರಿತರಾಗಿ ಜಮೀನು ನೀಡಲು ಮುಂದೆ ಬರುತ್ತಾರೋ ಅವರಿಗೆ ಮೊದಲ ಆದ್ಯತೆ ನೀಡಬೇಕು. ಸರ್ಕಾರದ ಮಾರ್ಗಸೂಚಿಯಂತೆ ಪರಿಹಾರ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಖ್ಯವಾಗಿ ರಸ್ತೆ, ವಿದ್ಯುತ್, ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು. ತಾಲ್ಲೂಕು ಮಟ್ಟದಲ್ಲಿ



ಕೈಗಾರಿಕೆಗಳನ್ನು ಸ್ಥಾಪಿಸಿದರೆ ಉದ್ಯೋಗ ಸೃಷ್ಟಿಗೆ ಮುನ್ನುಡಿ ಬರೆದಂತಾಗುತ್ತದೆ. ಈ ಬಗ್ಗೆ ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸೂಚಿಸಿದರು.

ಲ್ಯಾಂಡ್ ಬ್ಯಾಂಕ್ ಸ್ಥಾಪಿಸಿ

ಅಗತ್ಯವಿರುವ ಕಡೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಲ್ಯಾಂಡ್ ಬ್ಯಾಂಕ್ ಸ್ಥಾಪಿಸಲು ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಬೇಕು. ಲ್ಯಾಂಡ್ ಬ್ಯಾಂಕ್ ಸ್ಥಾಪಿಸಿದರೆ ಉದ್ಯಮಿಗಳು ತಮಗೆ ಬೇಕಾದ ಕಡೆ ಕೈಗಾರಿಕೆಗಳನ್ನು ಸ್ಥಾಪಿಸಲು ಅನುಕೂಲವಾಗಲಿದೆ. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಲಭ್ಯವಿರುವ ಜಮೀನನ್ನು ಬಳಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಇಳಕಲ್‌ನಲ್ಲಿ ಟೆಕ್ಸ್‌ಟೈಲ್ ಪಾರ್ಕ್

ಬಾಗಲಕೋಟೆ ಜಿಲ್ಲೆಯ ಇಳಕಲ್ ತಾಲ್ಲೂಕಿನಲ್ಲಿ ಬಹುದಿನಗಳ ಕನಸಾಗಿರುವ ಟೆಕ್ಸ್‌ಟೈಲ್ ಪಾರ್ಕ್ ಅನ್ನು ಆದಷ್ಟು ಶೀಘ್ರ ಸ್ಥಾಪಿಸಲು ಅಧಿಕಾರಿಗಳು ವಿಶೇಷ ನಿಗಾ ವಹಿಸಬೇಕು ಎಂದು ಸಚಿವ ವಿಜಯಾನಂದ ಕಾಶಪ್ಪನವರ ಕಟ್ಟುನಿಟ್ಟಿನ ಸೂಚನೆ ನೀಡಿದರು. ಇಳಕಲ್‌ನಲ್ಲಿ ಟೆಕ್ಸ್‌ಟೈಲ್ ಪಾರ್ಕ್ ನಿರ್ಮಾಣ ಮಾಡಬೇಕೆಂಬುದು ದಶಕಗಳ ಕನಸಾಗಿದೆ. ಬೇರೆ ಬೇರೆ ಕಾರಣಗಳಿಂದ ಇದು ಕಾರ್ಯಗತವಾಗದೆ ಕೇವಲ ಕಾಗದದಲ್ಲೇ ಉಳಿದಿದೆ ಎಂದು ಬೇಸರ ವ್ಯಕ್ತಪಡಿಸಿದರು.

ವೈಯಕ್ತಿಕವಾಗಿ ತಮಗೂ ಇಳಕಲ್‌ನಲ್ಲಿ ಟೆಕ್ಸ್‌ಟೈಲ್ ಪಾರ್ಕ್ ನಿರ್ಮಾಣ ಮಾಡಬೇಕೆಂಬ ಗುರಿಯಿದೆ. ತಮ್ಮ ಅಧಿಕಾರಾವಧಿಯಲ್ಲಿ ಈ ಕನಸು ನನಸಾಗಬೇಕು. ಅಧಿಕಾರಿಗಳು ಕುಂಟು ನೆಪ ಹೇಳದೆ, ಆದಷ್ಟು ಶೀಘ್ರ ಇದನ್ನು ಕಾರ್ಯಗತಗೊಳಿಸಲು ಮುಂದಾಗಬೇಕು ಎಂದು ಸೂಚಿಸಿದರು.

ಇಲ್ಲಿ ಟೆಕ್ಸ್‌ಟೈಲ್ ಪಾರ್ಕ್ ನಿರ್ಮಾಣವಾದರೆ ಯುವಕರಿಗೆ ಉದ್ಯೋಗ ದೊರೆಯಲಿದೆ. ಅಲ್ಲದೆ, ಇಲ್ಲಿಂದಲೇ ದೇಶ ಹಾಗೂ ವಿದೇಶಗಳಿಗೆ ಜವಳಿಯನ್ನು ರಫ್ತು ಮಾಡಬಹುದು. ಇದಕ್ಕೆ ಬೇಕಾಗಿರುವ ಎಲ್ಲ ರೀತಿಯ ಸಹಕಾರವನ್ನು ನೀಡಲಿದ್ದೇವೆ. ಮೊದಲು ಈ ಯೋಜನೆ ಕಾರ್ಯಗತವಾಗಬೇಕು ಎಂದು ನುಡಿದರು. ಇದೇ ವೇಳೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಗಳಿಂದ ಸಾಕಷ್ಟು ಸಮಸ್ಯೆ ಎದುರಾಗುತ್ತಿದೆ ಎಂದು ಕೆಲವು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು.

ಇದಕ್ಕೆ ಸ್ಪಂದಿಸಿದ ಸಚಿವ ಕಾಶಪ್ಪನವರ, ಆದಷ್ಟು ಶೀಘ್ರ ಇಲಾಖೆಯ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು. ಯಾವುದೇ ಕಾರಣಕ್ಕೂ ಸಣ್ಣ ಕೈಗಾರಿಕೆಗಳ ಉದ್ಯಮಿಗಳಿಗೆ ಅನಗತ್ಯವಾಗಿ ತೊಂದರೆ ನೀಡದಂತೆ ಸೂಚಿಸುವುದಾಗಿ ಅಭಯ ನೀಡಿದರು.

ಈ ಸಂದರ್ಭದಲ್ಲಿ ಎಂಎಸ್‌ಎಂಇ ನಿರ್ದೇಶಕ ವೈ.ಎಸ್. ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು.

ಬೆಂಗಳೂರಲ್ಲಿ ಅಂಗಡಿಯಲ್ಲೇ ಮಾಲೀಕನ ಬರ್ಬರ ಕೊಲೆ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.23– ಗೃಹೋಪಯೋಗಿ ವಸ್ತುಗಳ ಅಂಗಡಿ ಮಾಲೀಕರನ್ನು ಮಳಿಗೆಯೊಳಗೆ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಪುಟ್ಟೇನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ರಾಜು ಸಿಂಗ್ ಕೊಲೆಯಾದ ಅಂಗಡಿ ಮಾಲೀಕರು.

ಜೆಪಿ ನಗರದ 7ನೇ ಹಂತದ ಗಂಗಾ ಇಂಡಸ್ಟ್ರೀಸ್ ನ ಒಂದನೇ ಮಹಡಿಯಲ್ಲಿರುವ ಇರುವ ಇವರ ಅಂಗಡಿಯಲ್ಲಿ ಈ ಕೊಲೆ ಆಗಿದೆ.ರಾಜು ಸಿಂಗ್ ಅವರು ಕಳೆದ 30 ವರ್ಷಗಳಿಂದ ಬೆಂಗಳೂರು ನಗರದಲ್ಲಿ ವಾಸಿಸುತ್ತಿದ್ದು, ಜೆಪಿ ನಗರದಲ್ಲಿ ಅಂಗಡಿಯನ್ನು ನಡೆಸುತ್ತಿದ್ದರು.

ರಾತ್ರಿ ಸುಮಾರು 7:30ರ ಸಮಯದಲ್ಲಿ



ಅಂಗಡಿಯಲ್ಲಿ ಇವರೊಬ್ಬರಿದ್ದರು. ಆಗ ಅಂಗಡಿಗೆ ನುಗಿದ ದುಷ್ಕರ್ಮಿಯೊಬ್ಬ ಅವರ ತಲೆಗೆ ಹರಿತವಾದ ಆಯುಧದಿಂದ ಹೊಡೆದು ಕೊಲೆ ಮಾಡಿ ಪರಾರಿಯಾಗಿದ್ದಾನೆ.

ಸುದ್ದಿ ತಿಳಿದ ಅವರ ಮಗಳು ಸ್ಥಳಕ್ಕೆ ಧಾವಿಸಿ ಬಂದು ನೋಡಿ ನಂತರ ಪೊಲೀಸರಿಗೆ ದೂರು ನೀಡಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡ ಪುಟ್ಟೇನಹಳ್ಳಿ ಠಾಣೆ ಪೊಲೀಸರು ಆರೋಪಿಗಾಗಿ ಶೋಧ ನಡೆಸುತ್ತಿದ್ದಾರೆ.

12 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.23– ರಾಜ್ಯ ಸರ್ಕಾರ 12 ಮಂದಿ ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಡಾ.ತ್ರಿಲೋಕ್‌ಚಂದ್ರ ಕೆ.ವಿ. ಅವರನ್ನು ಕೃಷಿ ಇಲಾಖೆ ಕಾರ್ಯದರ್ಶಿ ಹುದ್ದೆಗೆ ವರ್ಗಾಯಿಸಲಾಗಿದೆ. ಈ ಹುದ್ದೆಯಲ್ಲಿದ್ದ ಕ್ಯಾಪ್ಟನ್ ಡಾ.ರಾಜೇಂದ್ರ ಅವರನ್ನು ವರ್ಗಾವಣೆ ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶಿಸಿದೆ.

ಡಾ. ರಾಕೇಶ್ ಕುಮಾರ್ ಕೆ. ಅವರಿಗೆ ನೀಡಿದ್ದ ಸಮಾಜ ಕಲ್ಯಾಣ ಇಲಾಖೆ ಆಯುಕ್ತರ ಹುದ್ದೆಯ ಜವಾಬ್ದಾರಿಯನ್ನು ಹಿಂಪಡೆದಿದ್ದು, ಉಪ ಮುಖ್ಯಮಂತ್ರಿಗಳ ಕಾರ್ಯದರ್ಶಿ ಹುದ್ದೆಗೆ ವರ್ಗಾಯಿಸಲಾಗಿದೆ. ಜೊತೆಗೆ ಭೂ ದಾಖಲೆಗಳು ಮತ್ತು ಸರ್ವೆ ಇಲಾಖೆ ಆಯುಕ್ತರ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ. ಈ ಹುದ್ದೆಯಲ್ಲಿದ್ದ ವೆಂಕಟ್ ರಾಜ್ ಅವರನ್ನು



ವರ್ಗಾವಣೆ ಮಾಡಲಾಗಿದೆ.

ಡಾ. ಅರುಂಧತಿ ಚಂದ್ರಶೇಖರ್ ಅವರನ್ನು ಖಜಾನೆ ಆಯುಕ್ತರ ಹುದ್ದೆಗೆ ವರ್ಗಾಯಿಸಲಾಗಿದ್ದು, ಈ ಹುದ್ದೆಯ ಹೊಣೆಗಾರಿಕೆಯಲ್ಲಿದ್ದ ರಘುನಂದನ್ ಮೂರ್ತಿ ಅವರನ್ನು ಬಿಡುಗಡೆಗೊಳಿಸಲಾಗಿದೆ.

ಪಾಟೀಲ್ ಯಲಗೌಡ ಶಿವನಗೌಡ ಅವರನ್ನು ಗ್ರಾಮೀಣಾಭಿವೃದ್ಧಿ ಆಯುಕ್ತರ ಹುದ್ದೆಗೆ ವರ್ಗಾಯಿಸಲಾಗಿದೆ. ಈ ಹುದ್ದೆಯ ಸಮವರ್ತಿತ ಪ್ರಭಾರದಲ್ಲಿದ್ದ ಫೌಝಿಯ ತರನಮ್ ಬಿ. ಅವರನ್ನು ಬಿಡುಗಡೆಗೊಳಿಸಲಾಗಿದೆ. ಅಲ್ಲದೆ, ಪಾಟೀಲ್ ಯಲಗೌಡ ಶಿವನಗೌಡ ಅವರಿಗೆ ಪಂಚಾಯತ್ ರಾಜ್ ಆಯುಕ್ತರ ಹುದ್ದೆ ಹಾಗೂ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಕಾರ್ಯ ನಿರ್ವಾಹಕ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಹೊಣೆಗಾರಿಕೆ ನೀಡಿ ಆದೇಶಿಸಲಾಗಿದೆ.

ವೈಶಾಲಿ ಎಂ.ಎಲ್. ಅವರನ್ನು ಎಂಎಸ್‌ಐಎಲ್‌ನ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ವರ್ಗಾವಣೆ ಮಾಡಿದ್ದು, ಈ ಹುದ್ದೆಯ ಸಮವರ್ತಿತ ಪ್ರಭಾರದಲ್ಲಿದ್ದ ಲವಿಶ್ ಒರ್ಡಿಯ ಅವರನ್ನು ಬಿಡುಗಡೆಗೊಳಿಸಲಾಗಿದೆ. ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಹುದ್ದೆಯಲ್ಲಿರುವ ಶಶಿಧರ್ ಕುರೇರ ಅವರಿಗೆ ಹೆಚ್ಚುವರಿಯಾಗಿ ಹಟ್ಟಿ ಚಿನ್ನದ ಗಣಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರ ಹುದ್ದೆ ಜವಾಬ್ದಾರಿ ನೀಡಲಾಗಿದೆ. ಈ ಹುದ್ದೆಯಲ್ಲಿದ್ದ ಶಿಲ್ಪಾ ಆರ್. ಅವರನ್ನು ವರ್ಗಾವಣೆ ಮಾಡಲಾಗಿದೆ.

ಆನಂದ್ ಪ್ರಕಾಶ್ ಮೀನಾ ಅವರನ್ನು ವಿಜಯಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹುದ್ದೆಗೆ ವರ್ಗಾಯಿಸಿದ್ದು, ಈ ಹುದ್ದೆಯಲ್ಲಿದ್ದ ರಿಶಿ ಆನಂದ್ ಅವರನ್ನು ವರ್ಗಾವಣೆ ಮಾಡಲಾಗಿದೆ.ರಿಶಿ ಆನಂದ್ ಅವರನ್ನು ಶಿವಮೊಗ್ಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹುದ್ದೆಗೆ ವರ್ಗಾವಣೆ ಮಾಡಿದ್ದು, ಈ ಹುದ್ದೆಯಲ್ಲಿದ್ದ ಹೇಮಂತ್ ಎನ್. ಅವರನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಲಾಗಿದೆ.

ಹೇಮಂತ್ ಎನ್. ಅವರನ್ನು ಎಸ್ಕಾಂ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ವರ್ಗಾವಣೆ ಮಾಡಲಾಗಿದ್ದು, ಈ ಹುದ್ದೆಯಲ್ಲಿದ್ದ ವೈಶಾಲಿ ಎಂ.ಎಲ್. ಅವರನ್ನು ವರ್ಗಾವಣೆ ಮಾಡಲಾಗಿದೆ. ದಿನೇಶ್ ಕುಮಾರ್ ಮೀನಾ ಅವರನ್ನು ಕೊಡಗು ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹುದ್ದೆಗೆ ವರ್ಗಾಯಿಸಿದ್ದು, ಈ ಹುದ್ದೆಯಲ್ಲಿದ್ದ ಆನಂದ್ ಪ್ರಕಾಶ್ ಮೀನಾ ಅವರನ್ನು ವರ್ಗಾವಣೆ ಮಾಡಿ ಆದೇಶಿಲಾಗಿದೆ.

ಕಾಮಗಾರಿ ವಿಳಂಬಕ್ಕೆ ಬ್ರೇಕ್: ಗುಣಮಟ್ಟಕ್ಕೆ ಆದ್ಯತೆ

ಜಿ.ಪಂ. ಸಿಇಒರಿಂದ ಜಿಲ್ಲಾದ್ಯಂತ ಕುಡಿಯುವ ನೀರು, ವಿ.ಬಿಜಿ ರಾಮ್‌ಜಿ ಕಾಮಗಾರಿಗಳ ಪರಿಶೀಲನೆ

"ಮುಂಜಾನೆಯ ಮೆರಗು"

ದಾವಣಗೆರೆ, ಸೆ.23– ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಜನರ ಮೂಲಭೂತ ಅಗತ್ಯಗಳಿಗೆ ಸಂಬಂಧಿಸಿದ ಕಾಮಗಾರಿಗಳು ವಿಳಂಬವಾಗದಂತೆ ಎಚ್ಚರಿಕೆ ವಹಿಸಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಅವರು ಬುಧವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸುದೀರ್ಘ ಪರಿಶೀಲನಾ ಪ್ರವಾಸ ನಡೆಸಿದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಹಾಗೂ ವಿ.ಬಿಜಿ ರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳ ಸ್ಥಳಕ್ಕೆ ನೇರವಾಗಿ ಭೇಟಿ ನೀಡಿ ಪ್ರಗತಿ ಪರಿಶೀಲಿಸಿದ ಅವರು, ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಯಾವುದೇ ರಾಜಿ ಮಾಡಿಕೊಳ್ಳಬಾರದು, ನಿಗದಿತ ಅವಧಿಯೊಳಗೆ ಕೆಲಸ ಪೂರ್ಣಗೊಳಿಸಿ ಜನರಿಗೆ ಸೌಲಭ್ಯ ಕಲ್ಪಿಸಬೇಕು ಎಂದು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಾಕ್‌ವಾಲ್ ಕಾಮಗಾರಿ ಪರಿಶೀಲನೆ

ಹರಿಹರ ತಾಲ್ಲೂಕಿನ ರಾಜನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಿಮ್ಲಾಪುರ ಗ್ರಾಮದಲ್ಲಿ ನಿರ್ಮಾಣಗೊಳ್ಳುತ್ತಿರುವ ಜಾಕ್‌ವಾಲ್ ಕಾಮಗಾರಿಯನ್ನು ಪರಿಶೀಲಿಸಿದ ಸಿಇಒ, ಕಾಮಗಾರಿಯ ಪ್ರಸ್ತುತ ಹಂತ, ತಾಂತ್ರಿಕ ಗುಣಮಟ್ಟ ಹಾಗೂ ಮುಂದಿನ ಕಾರ್ಯಯೋಜನೆ ಕುರಿತು ಇಂಜಿನಿಯರ್‌ಗಳಿಂದ ಮಾಹಿತಿ ಪಡೆದರು.



ಕಾಮಗಾರಿಯಲ್ಲಿ ಬಳಸುತ್ತಿರುವ ಸಾಮಗ್ರಿಗಳ ಗುಣಮಟ್ಟ, ನಿರ್ಮಾಣದ ಮಾನದಂಡ ಹಾಗೂ ಕಾಮಗಾರಿ ಪೂರ್ಣಗೊಳ್ಳುವ ಅವಧಿಯ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಕೂಲಿಕಾರರ ಸಮಸ್ಯೆ ಆಲಿಕೆ

ನಂತರ ಬೆಳ್ಳೂಡಿ ಹಾಗೂ ಸಾಲಕಟ್ಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿ.ಬಿಜಿ ರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಕಾಲುವೆ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಿಸಿದರು.

ಸ್ಥಳದಲ್ಲಿದ್ದ ಕೂಲಿಕಾರರೊಂದಿಗೆ ನೇರವಾಗಿ ಮಾತನಾಡಿದ ಸಿಇಒ, ಕೆಲಸದ ದಿನಗಳು, ಕೂಲಿ ಪಾವತಿ, ಕೆಲಸದ ಸ್ಥಳದಲ್ಲಿನ ಮೂಲ ಸೌಕರ್ಯಗಳು ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು. ಕೂಲಿಕಾರರು ತಿಳಿಸಿದ ಸಮಸ್ಯೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕು ಎಂದು ಸೂಚಿಸಿದರು.

ಹಳೆಬಾತಿಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ

ದಾವಣಗೆರೆ ತಾಲ್ಲೂಕಿನ ಹಳೆಬಾತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯನ್ನು ಪರಿಶೀಲಿಸಿದ ಅವರು, ಕಾಮಗಾರಿ ಪೂರ್ಣಗೊಳ್ಳುವಲ್ಲಿ ಅನಗತ್ಯ ವಿಳಂಬವಾಗದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕುಡಿಯುವ ನೀರು ಗ್ರಾಮೀಣ ಜನರ ನಿತ್ಯದ ಬದುಕಿಗೆ ನೇರವಾಗಿ ಸಂಬಂಧಿಸಿದ ಮೂಲಭೂತ ಸೌಲಭ್ಯವಾಗಿರುವುದರಿಂದ ಕಾಮಗಾರಿ ಪೂರ್ಣಗೊಂಡ ಬಳಿಕವೇ ಯೋಜನೆಯ ಉದ್ದೇಶ ಸಾರ್ಥಕವಾಗಲಿದೆ. ಹೀಗಾಗಿ ಕಾಮಗಾರಿಯನ್ನು ತ್ವರಿತಗೊಳಿಸಿ ಸಾರ್ವಜನಿಕರಿಗೆ ಶೀಘ್ರ ಸೇವೆ ಒದಗಿಸುವಂತೆ ಸೂಚಿಸಿದರು.

ಜಗಳೂರಿನ ಹಾಲೇಕಲ್ಲಿನಲ್ಲಿ ವೇಗಕ್ಕೆ ಸೂಚನೆ

ಜಗಳೂರು ತಾಲ್ಲೂಕಿನ ಹಾಲೇಕಲ್ಲು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗೂ ಸಿಇಒ ಭೇಟಿ ನೀಡಿ ಪರಿಶೀಲಿಸಿದರು.

ಕಾಮಗಾರಿಯ ಪ್ರಗತಿ, ಸ್ಥಳದಲ್ಲಿನ ಕಾರ್ಯಚಟುವಟಿಕೆ ಹಾಗೂ ಪೂರ್ಣಗೊಳ್ಳಲು ಬಾಕಿ ಇರುವ ಕೆಲಸಗಳ ಕುರಿತು ಮಾಹಿತಿ ಪಡೆದ ಅವರು, ಕೆಲಸದ ವೇಗ ಹೆಚ್ಚಿಸಿ ನಿಗದಿತ ಕಾಲಮಿತಿಯೊಳಗೆ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ಅಲ್ಲದೆ, ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಕಾಮಗಾರಿ ಸ್ಥಳಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪ್ರಗತಿ ಪರಿಶೀಲಿಸಬೇಕು. ನಿರ್ಮಾಣದ ಗುಣಮಟ್ಟದಲ್ಲಿ ಲೋಪ ಕಂಡುಬಂದರೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು



ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸ್ಥಳ ಪರಿಶೀಲನೆಗೆ ಆದ್ಯತೆ

ಕಚೇರಿಯಲ್ಲಿಯೇ ಕಾಮಗಾರಿಗಳ ಪ್ರಗತಿ ವರದಿಯನ್ನು ಪರಿಶೀಲಿಸುವ ಬದಲು ಸ್ಥಳಕ್ಕೆ ತೆರಳಿ ವಾಸ್ತವ ಸ್ಥಿತಿಯನ್ನು ಅರಿಯುವ ಉದ್ದೇಶದಿಂದ ಸಿಇಒ ಅವರು ವಿವಿಧ ಗ್ರಾಮಗಳಿಗೆ ಭೇಟಿ ನೀಡಿರುವುದು ಗಮನಾರ್ಹವಾಗಿದೆ.

ಕುಡಿಯುವ ನೀರಿನ ಯೋಜನೆಗಳು ನಿಗದಿತ ಅವಧಿಯಲ್ಲಿ ಪೂರ್ಣಗೊಂಡಿರೆ ಗ್ರಾಮೀಣ ಜನರಿಗೆ ನೀರಿನ ಸಮಸ್ಯೆ ನಿವಾರಣೆಯಾಗಲಿದ್ದು, ವಿ.ಬಿಜಿ ರಾಮ್‌ಜಿ ಯೋಜನೆಯ ಕಾಮಗಾರಿಗಳಿಂದ ಗ್ರಾಮ

ಕಾಮಗಾರಿಗಳ ಲೆಕ್ಕ ಕೇಳಿದ ಗ್ರಾಮಸ್ಥರು: ದಾಖಲೆಗಳಿವೆ ಎಂದ ಪಿಡಿಒ
ಕ್ಯಾಸೇನಳ್ಳಿ ಗ್ರಾಪಂನಲ್ಲಿ ಸಾಮಾಜಿಕ ಪರಿಶೋಧನಾ ಗ್ರಾಮಸಭೆ

"ಮುಂಜಾನೆಯ ಮೆರಗು"

ಜಗಳೂರು, ಸೆ.23– ತಾಲೂಕಿನ ಕ್ಯಾಸೇನಳ್ಳಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಮಂಗಳವಾರ ನಡೆದ ಸಾಮಾಜಿಕ ಪರಿಶೋಧನಾ ಗ್ರಾಮಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಕಾಮಗಾರಿಗಳ ಕುರಿತು ಗ್ರಾಮಸ್ಥರು ಪ್ರಶ್ನೆಗಳನ್ನು ಮುಂದಿಟ್ಟ ಘಟನೆ ನಡೆಯಿತು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಯೋಜನೆಗಳಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್ ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಕೆಲ ಗ್ರಾಮಸ್ಥರು, "ಕಾಮಗಾರಿಗಳು ಎಲ್ಲಿ ನಡೆದಿವೆ? ಏನು ಕೆಲಸ ಮಾಡಲಾಗಿದೆ?" ಎಂದು ಪ್ರಶ್ನಿಸಿ ವಿವರ ನೀಡುವಂತೆ ಒತ್ತಾಯಿಸಿದರು.

ಇದಕ್ಕೆ ಉತ್ತರಿಸಿದ ಪಿಡಿಒ ಶ್ರೀನಿವಾಸ್, ಕಾಮಗಾರಿಗಳಿಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳು ಹಾಗೂ ವಿವರಗಳು



ಪಂಚಾಯಿತಿಯಲ್ಲಿ ಲಭ್ಯವಿವೆ ಎಂದು ತಿಳಿಸಿದರು.

15ನೇ ಹಣಕಾಸು ಯೋಜನೆಯಡಿ ಕಾಮಗಾರಿ

15ನೇ ಹಣಕಾಸು ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಗ್ರಾಮಗಳ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಯೋಜನೆಯ ಅನುದಾನವನ್ನು ಬಳಸಿಕೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಗ್ರಾಮ ಪಂಚಾಯಿತಿಗೆ ಸಾರ್ವಜನಿಕರು ಸಕಾಲದಲ್ಲಿ ತೆರಿಗೆ ಪಾವತಿಸುವುದು ಅತ್ಯಗತ್ಯ. ತೆರಿಗೆ ಸಂಗ್ರಹ ಹೆಚ್ಚಾದರೆ ಗ್ರಾಮಗಳ ರಸ್ತೆ, ಚರಂಡಿ, ಕುಡಿಯುವ ನೀರು ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಅನುಕೂಲವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದರು.

ಯೋಜನೆಗಳ ಕುರಿತು ಚರ್ಚೆ

ಸಭೆಯಲ್ಲಿ ಗ್ರಾಮೀಣ ಉದ್ಯೋಗ ಹಾಗೂ ಅಭಿವೃದ್ಧಿ ಯೋಜನೆಗಳು ಸೇರಿದಂತೆ ಪಂಚಾಯಿತಿ ವ್ಯಾಪ್ತಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ವಿವಿಧ ಸರ್ಕಾರಿ ಯೋಜನೆಗಳ ಕುರಿತು ಚರ್ಚೆ ನಡೆಯಿತು. ಯೋಜನೆಗಳ ಅನುಷ್ಠಾನ, ಕಾಮಗಾರಿಗಳ ಪ್ರಗತಿ ಹಾಗೂ ಸಾರ್ವಜನಿಕರ ಸಹಭಾಗಿತ್ವದ ಬಗ್ಗೆ ಗ್ರಾಮಸ್ಥರು ಮಾಹಿತಿ ಪಡೆದುಕೊಂಡರು.

ಸಾಮಾಜಿಕ ಪರಿಶೋಧನಾ ಗ್ರಾಮಸಭೆ ಕೇವಲ ದಾಖಲೆ ಪರಿಶೀಲನೆಗೆ ಸೀಮಿತವಾಗದೆ, ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸುವ ವೇದಿಕೆಯಾಗಬೇಕು ಎಂಬ ಅಭಿಪ್ರಾಯವೂ ಸಭೆಯಲ್ಲಿ ವ್ಯಕ್ತವಾಯಿತು.

ಸಭೆಯಲ್ಲಿ ಸಿಡಿಪಿಒ ಇಲಾಖೆಯ ಮೇಲ್ವಿಚಾರಕಿ ಶಾಂತಮ್ಮ, ಸಿಬ್ಬಂದಿ ತಿಪ್ಪೇಸ್ವಾಮಿ ಸೇರಿದಂತೆ ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಜಿಲ್ಲಾ ಓಬಿಸಿ ಮೋರ್ಚಾ ಪದಾಧಿಕಾರಿಗಳಾಗಿ ಜಗಳೂರಿನ ಮೂವರು ನೇಮಕ



"ಮುಂಜಾನೆಯ ಮೆರಗು"

ಜಗಳೂರು ಸೆ, 23– ಜಿಲ್ಲಾ ಓಬಿಸಿ ಮೋರ್ಚಾದ ಪದಾಧಿಕಾರಿಗಳಾಗಿ ಜಗಳೂರು ತಾಲೂಕಿನ ಮೂವರು ಬಿಜೆಪಿ ಮುಖಂಡರನ್ನು ನೇಮಕ ಮಾಡಲಾಗಿದೆ.

ಸೊಕ್ಕೆ ಮಲ್ಲೇಶ್ ಅವರನ್ನು ಜಿಲ್ಲಾ ಓಬಿಸಿ ಮೋರ್ಚಾದ ಉಪಾಧ್ಯಕ್ಷರಾಗಿ, ಚಿಕ್ಕ ಉಜ್ಜಿನಿ ಅಂಜಿನಪ್ಪ ಅವರನ್ನು ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ಮಲ್ಲೇಶಪ್ಪ ತಿಪ್ಪೇಸ್ವಾಮಿ ಕಾಟಪ್ಪ ಅವರನ್ನು ಕಾರ್ಯಕಾರಿ ಸಮಿತಿ ಸದಸ್ಯರಾಗಿ ನೇಮಕ ಮಾಡಲಾಗಿದೆ.

ತಾಲೂಕಿನಿಂದ ಜಿಲ್ಲಾ ಓಬಿಸಿ ಮೋರ್ಚಾದ ಪದಾಧಿಕಾರಿಗಳಾಗಿ ಆಯ್ಕೆಯಾಗಲು ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ, ಮಾಜಿ ಶಾಸಕರಾದ ಎಸ್.ವಿ. ರಾಮಚಂದ್ರ ಹಾಗೂ ಎಚ್.ಪಿ. ರಾಜೇಶ್ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಮಾಜಿ ಸದಸ್ಯರು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಪಕ್ಷದ ಅಧ್ಯಕ್ಷರು ಮತ್ತು ಮುಖಂಡರು ಸಹಕಾರ ನೀಡಿರುವುದಾಗಿ ನೂತನ ಪದಾಧಿಕಾರಿಗಳು ತಿಳಿಸಿದ್ದಾರೆ.

ನೂತನ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿ, ಸಂಘಟನೆಯನ್ನು ಮತ್ತಷ್ಟು ಬಲಪಡಿಸಲು ಶ್ರಮಿಸುವುದಾಗಿ ಅವರು ತಿಳಿಸಿದ್ದಾರೆ.

ಗೃಹಲಕ್ಷ್ಮಿ ಪರಿಷ್ಕರಣೆ: ಮನೆಮನೆಗೆ ತೆರಳಿ ಮಾಹಿತಿ ಪರಿಶೀಲಿಸಿ: ಸಿಡಿಪಿಒ ಶಿವಕುಮಾರ್

"ಮುಂಜಾನೆಯ ಮೆರಗು"

ಜಗಳೂರು, ಸೆ.23– ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಸೌಲಭ್ಯ ಸಮರ್ಪಕವಾಗಿ ತಲುಪುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರು ತಮ್ಮ ವ್ಯಾಪ್ತಿಯ ಪ್ರತಿಯೊಂದು ಮನೆಗೂ ಭೇಟಿ ನೀಡಿ ಫಲಾನುಭವಿಗಳ ಮಾಹಿತಿಯನ್ನು ಸಮಗ್ರವಾಗಿ ಪರಿಶೀಲಿಸಿ ಪರಿಷ್ಕರಿಸಬೇಕು ಎಂದು ಸಿಡಿಪಿಒ ಶಿವಕುಮಾರ್ ಸೂಚಿಸಿದರು.

ಮಂಗಳವಾರ ಪಟ್ಟಣದ ಭುವನೇಶ್ವರಿ ವೃತ್ತದ ಸಮೀಪದ ಅಂಗನವಾಡಿ ಕೇಂದ್ರದಲ್ಲಿ ಕಾರ್ಯಕರ್ತೆಯರಿಗಾಗಿ ಆಯೋಜಿಸಿದ್ದ ಗೃಹಲಕ್ಷ್ಮಿ ಯೋಜನೆ ಪರಿಷ್ಕರಣೆ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಸರ್ಕಾರ ಗೃಹಲಕ್ಷ್ಮಿ ಯೋಜನೆಯ ಪರಿಷ್ಕರಣೆ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿದ್ದು, ಯಾವುದೇ ಅರ್ಹ ಫಲಾನುಭವಿಗೆ ಸೌಲಭ್ಯದಿಂದ ವಂಚನೆಯಾಗದಂತೆ ಅಗತ್ಯ ಮಾಹಿತಿ ಸಂಗ್ರಹಿಸುವುದು ಮುಖ್ಯವಾಗಿದೆ ಎಂದರು.

ಯಾವೆಲ್ಲ ಮಾಹಿತಿ ಪರಿಶೀಲಿಸಬೇಕು?

ಅಂಗನವಾಡಿ ಕಾರ್ಯಕರ್ತೆಯರು ತಮ್ಮ ವ್ಯಾಪ್ತಿಯ ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಯ ವಿವರಗಳನ್ನು ಪರಿಶೀಲಿಸಬೇಕು. ಫಲಾನುಭವಿಯ ಬ್ಯಾಂಕ್ ಖಾತೆ ಸಕ್ರಿಯವಾಗಿದೆಯೇ, ಖಾತೆಗೆ ಗೃಹಲಕ್ಷ್ಮಿ ಯೋಜನೆಯ ಹಣ ಜಮೆಯಾಗುತ್ತಿದೆಯೇ, ಇ–ಕೆವೈಸಿ ಪೂರ್ಣಗೊಂಡಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಅದೇ ರೀತಿ ಫಲಾನುಭವಿಯ ಆಧಾರ್ ಸಂಖ್ಯೆ, ಬ್ಯಾಂಕ್ ಖಾತೆ ಹಾಗೂ ಮೊಬೈಲ್ ಸಂಖ್ಯೆ ಪರಸ್ಪರ ಲಿಂಕ್ ಆಗಿರುವ ಬಗ್ಗೆ ಪರಿಶೀಲನೆ ನಡೆಸಬೇಕು. ಫಲಾನುಭವಿಯ ವಿವರಗಳಲ್ಲಿ ಯಾವುದೇ ಬದಲಾವಣೆ, ದೋಷ ಅಥವಾ ತಾಂತ್ರಿಕ ಸಮಸ್ಯೆ ಕಂಡುಬಂದಲ್ಲಿ ಅದನ್ನು ಗುರುತಿಸಿ, ಸಂಬಂಧಪಟ್ಟ ವ್ಯವಸ್ಥೆಯಲ್ಲಿ ಸರಿಯಾದ ಮಾಹಿತಿಯನ್ನು ದಾಖಲಿಸುವಂತೆ ಸೂಚಿಸಿದರು.

ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯವು ಅರ್ಹ ಫಲಾನುಭವಿಗೆ ಸಮರ್ಪಕವಾಗಿ ತಲುಪುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು



ಪರಿಷ್ಕರಣೆಯ ಪ್ರಮುಖ ಉದ್ದೇಶವಾಗಿದೆ. ಆದ್ದರಿಂದ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಫಲಾನುಭವಿಗಳೊಂದಿಗೆ ಸಮರ್ಪಕವಾಗಿ ಮಾಹಿತಿ ಪಡೆದು, ಅವರಿಗೆ ಅಗತ್ಯವಿರುವ ಮಾರ್ಗದರ್ಶನ ನೀಡಬೇಕು ಎಂದರು.

ತಂತ್ರಾಂಶದಲ್ಲಿ ಮಾಹಿತಿ ದಾಖಲಿಸಿ

ಮನೆ ಭೇಟಿ ಸಂದರ್ಭದಲ್ಲಿ ಸಂಗ್ರಹಿಸಿದ ಮಾಹಿತಿಯನ್ನು ಇಲಾಖೆಯಿಂದ ನೀಡಲಾಗಿರುವ ತಂತ್ರಾಂಶದಲ್ಲಿ ತಪ್ಪಿಲ್ಲದೆ ದಾಖಲಿಸಬೇಕು. ದಾಖಲೆ ಮಾಡುವಾಗ ಫಲಾನುಭವಿಯ ವೈಯಕ್ತಿಕ ವಿವರಗಳು, ಬ್ಯಾಂಕ್ ಖಾತೆ ಹಾಗೂ ಆಧಾರ್‌ಗೆ ಸಂಬಂಧಿಸಿದ ಮಾಹಿತಿಯಲ್ಲಿ ಯಾವುದೇ ತಪ್ಪು ಉಂಟಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಶಿವಕುಮಾರ್ ಸಲಹೆ ನೀಡಿದರು.

ಮೇಲ್ವಿಚಾರಕಿ ಅನುರಾಧ ಮಾತನಾಡಿ, ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ ಫಲಾನುಭವಿಗಳಿಗೆ ಯೋಜನೆಯ ಕುರಿತು ಅಗತ್ಯ ಮಾಹಿತಿ ನೀಡುವುದರ ಜೊತೆಗೆ, ದಾಖಲೆಗಳಲ್ಲಿರುವ ವ್ಯತ್ಯಾಸಗಳನ್ನು ಗುರುತಿಸಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಶಾಲಾ ಆವರಣದಲ್ಲಿ ನೀರು ನಿಂತು ಮಕ್ಕಳ ಪರದಾಟ ಸಮಸ್ಯೆ ಪರಿಹಾರಕ್ಕೆ ಎಸ್‌ಡಿಎಂಸಿ ಆಗ್ರಹ



(1ನೇ ಪುಟದಿಂದ) ಅಧಿಕಾರಿಗಳ ಗಮನ ಶಾಲೆಯತ್ತ ಸಮರ್ಪಕವಾಗಿ ಹರಿಯುತ್ತಿಲ್ಲ ಎಂಬ ಆರೋಪವೂ ಕೇಳಿಬಂದಿದೆ. ಶಾಲೆಯ ಮೂಲಸೌಕರ್ಯ ಹಾಗೂ ವಿದ್ಯಾರ್ಥಿಗಳ ಸಮಸ್ಯೆಗಳ ಕುರಿತು ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಈ ಸಮಸ್ಯೆ ಕುರಿತು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಖಆಒಅ) ವತಿಯಿಂದ ಹಲವು ಬಾರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಮನವಿ ಸಲ್ಲಿಸಿ, ಶಾಲಾ ಆವರಣದಲ್ಲಿ ನಿಂತಿರುವ ನೀರನ್ನು ತೆರವುಗೊಳಿಸುವಂತೆ ಹಾಗೂ ಶಾಶ್ವತವಾಗಿ ನೀರು ಹರಿದುಹೋಗುವ ವ್ಯವಸ್ಥೆ ಕಲ್ಪಿಸುವಂತೆ ಮನವಿ ಮಾಡಲಾಗಿದೆ. ಆದರೆ ಈವರೆಗೂ ಸಮಸ್ಯೆಗೆ ಸೂಕ್ತ ಪರಿಹಾರ ದೊರೆತಿಲ್ಲ ಎಂದು ಸಮಿತಿ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮಕ್ಕಳ ಸುರಕ್ಷತೆ ಹಾಗೂ ಆರೋಗ್ಯದ ದೃಷ್ಟಿಯಿಂದ ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಬೇಕು. ಕೂಡಲೇ ನೀರು ತೆರವುಗೊಳಿಸಿ, ಚರಂಡಿ ಅಥವಾ ಸೂಕ್ತ ಒಳಚರಂಡಿ ವ್ಯವಸ್ಥೆ ನಿರ್ಮಿಸುವ ಮೂಲಕ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಶಾಲೆಯ ಸಮಸ್ಯೆಯನ್ನು ನಿರ್ಲಕ್ಷಿಸದೆ ಗ್ರಾಮ ಪಂಚಾಯಿತಿ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಖಆಒಅ ಸಮಿತಿ ಆಗ್ರಹಿಸಿದೆ.

ಸದಸ್ಯರ ಸಹಕಾರದಿಂದ ಸೊಸೈಟಿಗೆ 25 ವಸಂತ: ಎಸ್.ಎಂ.ಪುಷ್ಪಲತಾ

"ಮುಂಜಾನೆಯ ಮೆರಗು"

ಜಗಳೂರು : ಸೆ.22– ಸೊಸೈಟಿಯ ಎಲ್ಲಾ ಸದಸ್ಯರ ಸಹಕಾರದಿಂದ 25 ವಸಂತಗಳನ್ನು ಪೂರೈಸಲು ಸಾಧ್ಯವಾಗಿದೆ ಎಂದು ಕಾರುಣ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಕಾರ್ಯದರ್ಶಿ ಎಸ್.ಎಂ. ಪುಷ್ಪಲತಾ ಹೇಳಿದರು.

ಪಟ್ಟಣದ ರಂಗನಾಥ ಬಡಾವಣೆಯಲ್ಲಿರುವ ಸೊಸೈಟಿಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ನಮ್ಮ ಸೊಸೈಟಿಯಲ್ಲಿ ಇದೀಗ 25 ವಸಂತಗಳನ್ನು ಯಶಸ್ವಿಯಾಗಿ ಪೂರೈಸಲು ಸರ್ವ ಸದಸ್ಯರ ಸಹಕಾರ, ಅಗತ್ಯ ಸಲಹೆ ಸೂಚನೆಯ ಜೊತೆಗೆ ಪಾರದರ್ಶಕವಾದ ವ್ಯವಹಾರವೆಂದರೆ ಅತಿಶಯೋಕ್ತಿಯಾಗಲಾರದು. ಯಾವುದೇ ಸಹಕಾರ ಸಂಘಗಳು ಸುಲಲಿತವಾಗಿ ನಡೆಯಬೇಕಾದರೆ ಆರ್ಥಿಕ ಶಿಸ್ತು ಕಾಪಾಡಿಕೊಳ್ಳುವುದು ಅತ್ಯವಶ್ಯ. ನಮ್ಮ ಸೊಸೈಟಿಯಲ್ಲಿ ಸಾಲ ತೆಗೆದು–



ಕೊಂಡ ಫಲಾನುಭವಿಗಳು ಸಕಾಲದಲ್ಲಿ ಮರು ಪಾವತಿ ಮಾಡಿದರೆ ಇನ್ನಷ್ಟು ಪ್ರಗತಿ ಕಾಣಲು ಸಹಕಾರಿಯಾಗಲಿದೆ. ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಖರ್ಚಿನ ಜೊತೆಗೆ ಉಳಿತಾಯ ಮಾಡುವುದನ್ನು ರೂಢಿಸಿಕೊಂಡರೆ ಸಂಕಷ್ಟದ ಸಮಯದಲ್ಲಿ ಉಪಯೋಗವಾಗಲಿದೆ. ಎಲ್ಲರೂ ಜಾಗೃತರಾಗಿ ಆದಷ್ಟು ದುಂದು ವೆಚ್ಚಗಳಿಗೆ ಕಡಿವಾಣ ಹಾಕಿ ಸರಳ ಜೀವನ ನಡೆಸಿದರೆ ಸಾಲಗಾರರಾಗುವುದು ತಪ್ಪಲಿದೆ ಎಂದು ಸಲಹೆ ನೀಡಿದರು.

ಪ್ರಸ್ತುತವಾಗಿ ನಮ್ಮ ಸೊಸೈಟಿಯು 537 ಸದಸ್ಯರನ್ನು ಹೊಂದಿದ್ದು, ಷೇರುಗಳ ಮೊತ್ತ 5,16050 ರೂ. ಗಳಷ್ಟಿದೆ. ಉಳಿತಾಯದ ಮೊತ್ತ 34100 ರೂ.ಗಳಿದ್ದು, ಉಳಿತಾಯ ಖಾತೆಯಲ್ಲಿ 20900 ಹಾಗೂ ಆರ್.ಡಿ.ಯಲ್ಲಿ 13200 ರೂ.ಗಳಿದೆ ಎಂದು ಮಾಹಿತಿ ನೀಡಿದ ಅವರು, ಇದೀಗ ನಮ್ಮ ಸೊಸೈಟಿಯಿಂದ ಹೆಚ್ಚಿನ ಸಾಲ ಪಡೆಯಲು ಅವಕಾಶವಿದ್ದು, ಅದರ ಸದುಪಯೋಗ ಪಡೆದುಕೊಳ್ಳಲು ಸದಸ್ಯರು ಮುಂದಾಗಬೇಕಿದೆ ಎಂದು ಹೇಳಿದ ಅವರು, ನಮಗೆ ಸಹಕಾರ ಬ್ಯಾಂಕ್‌ನಿಂದ 25 ಲಕ್ಷ ಸಹಾಯಧನ ಪಡೆಯಲು ಅವಕಾಶವಿದ್ದು, ಅದರ ಸಾಧಕ ಬಾಧಕಗಳನ್ನು ಚರ್ಚಿಸಲಾಗಿದ್ದು, ಅವರ ನಿಬಂಧನೆಗಳ ಬಗ್ಗೆ ಗಮನ ಹರಿಸಲಾಗುತ್ತಿದೆ ಎಂದರು.

ಸಭೆಯಲ್ಲಿ ಸೊಸೈಟಿಯ ಅಧ್ಯಕ್ಷ ಪಿ.ಬಿ. ವಿರುಪಾಕ್ಷಪ್ಪ, ಉಪಾಧ್ಯಕ್ಷೆ ಬೊಮ್ಮಕ್ಕ, ನಿರ್ದೇಶಕರಾದ ಸಿ.ಕೆ. ಹನುಮಂತಪ್ಪ, ಎಂ. ಹನುಮಂತಪ್ಪ, ಮಲ್ಲಮ್ಮ, ಟಿ. ಕುಮಾರ, ಹಾಲಪ್ಪ, ಕುಮಾರಪ್ಪ, ಸಣ್ಣಚಿತ್ತಪ್ಪ, ಪಿ. ಪಾಪಯ್ಯ, ಜಿ. ತಿಪ್ಪೇಸ್ವಾಮಿ, ಮಂಜಮ್ಮ, ಸರೋಜಮ್ಮ, ಸದಸ್ಯರಾದ ಕೃಷ್ಣಪ್ಪ, ಮಂಜಪ್ಪ, ಅಜ್ಜಪ್ಪ, ನಾಗಮ್ಮ, ತಿಪ್ಪಪ್ಪ, ಸಿದ್ದಮ್ಮ, ಶಾಂತಪ್ಪ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಜಾತ್ರೆ, ಹಬ್ಬಗಳ ವೆಚ್ಚ ಕಡಿಮೆ ಮಾಡಿ: ಕೆಪಿಸಿಸಿ ಎಸ್ಟಿ ಘಟಕದ ಪ್ರಧಾನ ಕಾರ್ಯದರ್ಶಿ ಕೀರ್ತಿಕುಮಾರ್



"ಮುಂಜಾನೆಯ ಮೆರಗು"

ಜಗಳೂರು ಸೆ, 23– ಹಬ್ಬ–ಹರಿದಿನ ಹಾಗೂ ಜಾತ್ರೆಗಳ ಸಂದರ್ಭದಲ್ಲಿ ಅನಗತ್ಯವಾಗಿ ಹೆಚ್ಚಿನ ಹಣ ಖರ್ಚು ಮಾಡುವುದನ್ನು ಕಡಿಮೆ ಮಾಡಿ, ಪ್ರಸ್ತುತ ಬರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಮಿತವ್ಯಯಕ್ಕೆ ಆದ್ಯತೆ ನೀಡಬೇಕು ಎಂದು ಕೆಪಿಸಿಸಿ ಎಸ್ಟಿ ಘಟಕದ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಗ್ರಾಮಸ್ಥರಿಗೆ ಸಲಹೆ ನೀಡಿದರು.

ತಾಲೂಕಿನ ಮಾಗಡಿ ಗ್ರಾಮದ ಜಾತ್ರೆಯ ಅಂಗವಾಗಿ ಗ್ರಾಮಕ್ಕೆ ಭೇಟಿ ನೀಡಿದ ಅವರು, ಪ್ರಸಕ್ತ ವರ್ಷ ಮಳೆ ಕೊರತೆಯಿಂದ ಬರ ಪರಿಸ್ಥಿತಿ ಎದುರಾಗಿದ್ದು, ರೈತರು ಸೇರಿದಂತೆ ಗ್ರಾಮೀಣ ಜನರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಜಾತ್ರೆ ಹಾಗೂ ಹಬ್ಬಗಳ ಆಚರಣೆಗೆ ಅಗತ್ಯಕ್ಕಿಂತ ಹೆಚ್ಚಿನ ವೆಚ್ಚ ಮಾಡದೆ, ಸರಳವಾಗಿ ಆಚರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಜಾತ್ರೆ, ಹಬ್ಬಗಳಿಗಾಗಿ ಮಾಡುವ ಅನಗತ್ಯ ಖರ್ಚನ್ನು ಕಡಿಮೆ ಮಾಡಿ, ಆ ಹಣವನ್ನು ಮಕ್ಕಳ ಶಿಕ್ಷಣ ಹಾಗೂ ಅವರ ಭವಿಷ್ಯಕ್ಕಾಗಿ ಬಳಸುವುದು ಉತ್ತಮ. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಹೆಚ್ಚಿನ ಆದ್ಯತೆ ನೀಡಬೇಕು. ಶಿಕ್ಷಣವೇ ಮಕ್ಕಳ ಭವಿಷ್ಯವನ್ನು ರೂಪಿಸುವ ಪ್ರಮುಖ ಸಾಧನವಾಗಿದ್ದು, ಈ ನಿಟ್ಟಿನಲ್ಲಿ ಪೋಷಕರು ಗಮನಹರಿಸಬೇಕು ಎಂದು ತಿಳಿಸಿದರು.

ಬರಗಾಲದ ಹಿನ್ನೆಲೆಯಲ್ಲಿ ಗ್ರಾಮಸ್ಥರು ಮಿತವ್ಯಯದ ಜೀವನಶೈಲಿಯನ್ನು ಅಳವಡಿಸಿಕೊಂಡು, ಅಗತ್ಯವಿರುವ ಕಡೆ ಮಾತ್ರ ಹಣ ಖರ್ಚು ಮಾಡುವ ಮೂಲಕ ಕುಟುಂಬದ ಆರ್ಥಿಕ ಸ್ಥಿರತೆಗೆ ಆದ್ಯತೆ ನೀಡಬೇಕು ಎಂದು ಕೀರ್ತಿಕುಮಾರ್ ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರು, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ರೈತರ ನೋವಿನೊಂದಿಗೆ ಚಿನ್ನಾಟ ಸರಿಯಲ್ಲ: ಶಾಸಕ ದೇವೇಂದ್ರಪ್ಪ



"ಮುಂಜಾನೆಯ ಮೆರಗು"

ಜಗಳೂರು, ಸೆ.23– "ಕೆಸರಿ ಶಾಲು ಹಾಕಿಕೊಂಡು ಪುಂಡಾಟಿಕೆ ನಡೆಸಿ, ರೈತರ ನೋವಿಗೆ ಬೆಂಕಿ ಹಚ್ಚುವ ಕೆಲಸ ಮಾಡುವುದು ಯಾವ ನ್